# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ



**ಸುಭಾಷಿತ:**

ಯಾವಾಗ ಧರ್ಮದ ಅವನತಿ ಆಗುವುದೋ
ಯಾವಾಗ ಅಧರ್ಮದಲ್ಲಿ ಉನ್ನತಿ ಆಗುವುದೋ
ಆಗೆಲ್ಲಾ ಸತ್ಪುರುಷರ ಉದ್ಧಾರಕ್ಕಾಗಿ,
ಅಧರ್ಮಿಯರ ವಿನಾಶಕ್ಕಾಗಿ,
ಧರ್ಮದ ಪುನಸ್ಥಾಪನೆಗಾಗಿ
ನಾನು ಮತ್ತೆ ಮತ್ತೆ ಜನ್ಮ ತಾಳುತ್ತೇನೆ..
ಇದು ಪ್ರತಿ ಯುಗದಲ್ಲಿಯೂ ಆಗುತ್ತಲಿದೆ..
ಮುಂದೆಯೂ ಸದಾ ಆಗುತ್ತಲೇ ಇರುವುದು..

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 10-10-2025 to 16-10-2025 ಬೆಲೆ:10-00 ಸಂಪುಟ–1 ಸಂಚಿಕೆ–02 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ

www.karavalitharangini.com

ಕರಾವಳಿ ತರಂಗಿಣಿ
ಮಂಗಳೂರು





ದಸರಾ ಹಬ್ಬ ಕಳೆದು ಈಗ ದೀಪಾವಳಿ ಹಬ್ಬ ಸಮೀಪಿಸುತ್ತಿದೆ. ಹಬ್ಬ ಬಂತೆಂದರೆ ಅಕ್ಕ ಪಕ್ಕದ ಜಿಲ್ಲೆಗಳಿಂದ ರೈತರು, ವ್ಯಾಪಾರಿಗಳು ಮಂಗಳೂರು ನಗರದ ಕ್ಲಾಕ್ ಟವರ್ ಆಸುಪಾಸು ಪಾದಾಚಾರಿ ರಸ್ತೆಯಲ್ಲಿ ಹೂವುಗಳನ್ನು ತಂದು ಮಾರುವುದು ರೂಡಿ. ಇದರಿಂದಾಗಿ ಲಕ್ಷಾಂತರ ರೂಪಾಯಿ ವಹಿವಾಟು ನಡೆಯುತ್ತದೆ. ಆದರೆ ವ್ಯಾಪಾರದ ನಂತರ ಉಳಿದ ಹೂವುಗಳ ರಾಶಿಯನ್ನು ಎಲ್ಲೆಂದರಲ್ಲಿ ಬಿಸಾಕಿ ಹೋಗುವುದರಿಂದ, ಸ್ವಚ್ಚತಾ ಕಾರ್ಮಿಕರು ಬರುವವರೆಗೂ ಹೂಗಳು ಕೊಳೆತು ಸಾರ್ವಜನಿಕರು ಓಡಾಡುವುದು ಕಷ್ಟವಾಗುತ್ತಿದೆ. ಈ ಬಗ್ಗೆ ಹೂ ಮಾರಾಟಗಾರರಿಗೆ ಜಾಗೃತಿ ಮೂಡಿಸುವುದು ಉತ್ತಮ

## ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಕ್ಯಾ. ಚೌಟ



ಅಮೆರಿಕಾ : ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ 80ನೇ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನದಲ್ಲಿ ಭಾರತವನ್ನು ಪ್ರತಿನಿಧಿಸಿರುವ ದಕ್ಷಿಣ ಕನ್ನಡ ಸಂಸದರಾದ ಕ್ಯಾ. ಬ್ರಿಜೇಶ್ ಚೌಟ ಅವರು ನಮ್ಮ ದೇಶದ ಸುಸ್ಥಿರ ಅಭಿವೃದ್ಧಿಯ ಬಗ್ಗೆ ವಿಷಯ ಮಂಡಿಸಿದ್ದಾರೆ. ಆ ಮೂಲಕ ವಿಶ್ವದ ಅತ್ಯುನ್ನತ ವೇದಿಕೆಯಲ್ಲಿ ದೇಶವನ್ನು ಪ್ರತಿನಿಧಿಸುವ ಮೂಲಕ ಕರ್ನಾಟಕಕ್ಕೆ ಹೆಮ್ಮೆ ತಂದಿದ್ದಾರೆ. ಭಾರತದಿಂದ ಸರ್ವ ಪಕ್ಷಗಳ ಸಂಸದರನ್ನು ಒಳಗೊಂಡಿರುವ ಪಿಪಿ ಚೌಧರಿ ನೇತೃತ್ವದ ನಿಯೋಗವು ನ್ಯೂಯಾರ್ಕ್‌ನಲ್ಲಿ ಅ.8ರಿಂದ 14 ರವರೆಗೆ ನಡೆಯುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆ ಅಧಿವೇಶನದಲ್ಲಿ ಭಾಗವಹಿಸುತ್ತಿದೆ. ಈ ತಂಡದಲ್ಲಿ ಕರ್ನಾಟಕದಿಂದ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಸ್ಥಾನ ಪಡೆದಿರುವುದು ಮಾತ್ರವಲ್ಲ ಈ ವಿಶ್ವ ವೇದಿಕೆಯಲ್ಲಿ ಭಾರತದ ಸುಸ್ಥಿರ ಅಭಿವೃದ್ಧಿ ಕುರಿತಂತೆ ವಿಚಾರ ಮಂಡಿಸುವ ಮೂಲಕ ಗಮನಸೆಳೆದಿದ್ದಾರೆ.

3 ನೇ ಪುಟಕ್ಕೆ.....

## ಅವೈಜ್ಞಾನಿಕ ಸಮೀಕ್ಷೆ ಜನತೆಗೆ ಸಮಸ್ಯೆ ತಂದೊಡ್ಡಿದೆ – ಕಾಮತ್




ಮಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರ ಕೈಗೊಂಡಿರುವ ಅವೈಜ್ಞಾನಿಕ ಜಾತಿ ಸಮೀಕ್ಷೆಯಿಂದಾಗಿ ಮಂಗಳೂರಿನ ಜನತೆ ತೀವ್ರ ಸಮಸ್ಯೆ ಅನುಭವಿಸುತ್ತಿದ್ದು ಅಗತ್ಯ ಕೆಲಸಗಳಿಗಾಗಿ ಸಾರ್ವಜನಿಕರು ಪರದಾಡುವಂತಾಗಿದೆ ಎಂದು ಶಾಸಕ ವೇದವ್ಯಾಸ ಕಾಮತ್ ರವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಂಗಳೂರು ಮಹಾನಗರ ಪಾಲಿಕೆ, ತಾಲೂಕು ಕಚೇರಿ ಸೇರಿದಂತೆ ಎಲ್ಲಾ ಇಲಾಖೆಯ ಡಾಟಾ ಎಂಟ್ರಿ ಆಪರೇಟರ್‌ಗಳು, ಕಿರಿಯ ಇಂಜಿನಿಯರ್‌ಗಳ ಗ್ರಾಮ ಲೆಕ್ಕಾಧಿಕಾರಿಗಳು, ಹೀಗೆ ಬಹುತೇಕ

3 ನೇ ಪುಟಕ್ಕೆ.....

## ಕಾಂಗ್ರೆಸ್‌ನ ನೀತಿ ಬದಲಿಸಲು ಯಾರಿಂದಲೂ ಸಾಧ್ಯವಿಲ್ಲ – ಡಿಕೆಶಿ





ಬರಂಗಳೂರು: ನಮ್ಮದು ಕಾಂಗ್ರೆಸ್ ಪಕ್ಷ. ಈ ದೇಶಕ್ಕೆ ಸಂವಿಧಾನ, ಸ್ವಾತಂತ್ರ್ಯ ಕೊಟ್ಟ ಪಕ್ಷ. ಈ ದೇಶದಲ್ಲಿ ಕಾಂಗ್ರೆಸ್ ಸರ್ಕಾರ ತಂದಿರುವ ಕಾನೂನು, ಯೋಜನೆಗಳನ್ನು ಬೇರೆ ಯಾವುದೇ ಸರ್ಕಾರಗಳು ಬದಲಾಯಿಸಲು ಸಾಧ್ಯವಾಗಿಲ್ಲ. ಶೈಕ್ಷಣಿಕ ಹಕ್ಕು, ಆಹಾರ ಭದ್ರತೆ, ಉದ್ಯೋಗ ಖಾತ್ರಿ, ಬ್ಯಾಂಕುಗಳ ರಾಷ್ಟ್ರೀಕರಣ, ಆಧಾರ್, ಭೂ ಸುಧಾರಣೆ ಕಾಯ್ದೆ ಯಾವುದೇ ಆಗಿರಲಿ ನಮ್ಮ ಯೋಜನೆಯನ್ನು ಬೇರೆಯವರು ಬದಲಿಸಲು ಆಗುವುದಿಲ್ಲ. ನಾವು ಬೆಂಗಳೂರಿನ ಎಲ್ಲಾ ಆಸ್ತಿಗಳನ್ನು ಡಿಜಿಟಲೀಕರಣ ಮಾಡುತ್ತಿದ್ದು, ಬಿ ಖಾತಗಳನ್ನು

3 ನೇ ಪುಟಕ್ಕೆ.....







# ಸಂಪ್ರದಾಯ

## ಚು ಫಾತ್ ಡ್ಯಾನ್ಸ್




ಸಿಕ್ಕಿಂ ಬಹು ಜನಾಂಗೀಯ ರಾಜ್ಯ. ಇದು ತನ್ನ ಸ್ಥಳೀಯ ಪರಂಪರೆ ಮತ್ತು ಸಂಪ್ರದಾಯಗಳಿಗಾಗಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮೆಚ್ಚುಗೆಯನ್ನು ಪಡೆದಿದೆ. ಸಿಕ್ಕಿಂನಲ್ಲಿ ಹಲವಾರು ಬುಡಕಟ್ಟುಗಳು ವಾಸಿಸುತ್ತಿದೆ. ಆ ಪ್ರತಿಯೊಂದು ಗುಂಪುಗಳು ಭಾಷೆ, ಸಂಸ್ಕೃತಿ, ಪರಂಪರೆ, ಸಂಪ್ರದಾಯಗಳನ್ನು ಹೊಂದಿವೆ ಮತ್ತು ತಮ್ಮದೇ ಆದ ನೃತ್ಯ ಪ್ರಕಾರಗಳನ್ನು ಹೊಂದಿವೆ. ಸಂತೋಷದಾಯಕ ಆಚರಣೆಗಳು ಮತ್ತು ಹಬ್ಬಗಳು ಸಿಕ್ಕಿಂನ ವಿಶಿಷ್ಟ ಜಾನಪದ ನೃತ್ಯವನ್ನು ವೀಕ್ಷಿಸಲು ಅನೇಕ ಅವಕಾಶಗಳನ್ನು ನೀಡುತ್ತವೆ. ಅವುಗಳಲ್ಲಿ ಚು ಫಾತ್ ಡ್ಯಾನ್ಸ್ ಒಂದು. ಈ ನೃತ್ಯವನ್ನು ವಿಶೇಷವಾಗಿ ಉತ್ತರ ಬೌದ್ಧ ಕ್ಯಾಲೆಂಡರ್‌ನ 7 ನೇ ತಿಂಗಳ 15 ನೇ ದಿನದಂದು ಪ್ರದರ್ಶಿಸಲಾಗುತ್ತದೆ. ಲೆಪ್ಚಾ ಸಮುದಾಯವು ತನ್ನ ಸಹವರ್ತಿಗಳಾದ ಮೌಂಟ್ ನಾರ್ಶಿಂಗ್, ಮೌಂಟ್ ಕಬ್ರು ಮತ್ತು ಮೌಂಟ್ ಸಿಂಬ್ರಾಮ್ ಜೊತೆಗೆ ಕಾಂಚನಜುಂಗಾ ಪರ್ವತ ಶಿಖರಗಳ ಎತ್ತರವನ್ನು ಪ್ರಶಂಸಿಸಲು ಈ ನೃತ್ಯವನ್ನು ಪ್ರದರ್ಶಿಸುತ್ತದೆ. ಈ ಶಿಖರಗಳು ಖನಿಜಗಳು, ಔಷಧಗಳು, ಉಪ್ಪು ಮತ್ತು ಆಹಾರ ಧಾನ್ಯಗಳನ್ನು ಹೊಂದಿರುತ್ತವೆ ಎಂದು ನಂಬಲಾಗಿದೆ. ಚು ಫಟ್ ನೃತ್ಯವನ್ನು ಲೆಪ್ಚಾಗಳು ಭಕ್ತಿಯ ಉತ್ಸಾಹದಲ್ಲಿ ಪ್ರದರ್ಶಿಸುತ್ತಾರೆ. ನರ್ತಕರ ಭಕ್ತಿ ಮತ್ತು ದೈವಿಕತೆಗೆ ಶರಣಾಗುವ ಅವರ ಭಾವನೆಗಳಿಂದ ಕಲಾವಿದರು ಭಾವಪರವಶರಾಗುತ್ತಾರೆ. ಇದು ಪಾಂಗ್ ಲ್ಯಾಬ್ಸೋಲ್‌ನ ಶುಭ ಸಂದರ್ಭದಲ್ಲಿ ನಡೆಯುತ್ತದೆ. ಪಾಂಗ್ ಲ್ಯಾಬ್ಸೋಲ್ ಹಬ್ಬವು ಕೃತಜ್ಞತೆಯ ಆಚರಣೆಯಾಗಿದೆ. ಹಿನ್ನಲೆಯಲ್ಲಿ ಭಕ್ತಿಗೀತೆಗಳೊಂದಿಗೆ, ಚು ಫಟ್ ನೃತ್ಯಗಾರರು ಪ್ರಕೃತಿಯನ್ನು ಆರಾಧಿಸುತ್ತಾರೆ. ಮೌಂಟ್ ಕಾಂಚನ್‌ಜುಂಗಾ ಸಿಕ್ಕಿಂನ ಅತಿ ಎತ್ತರದ ಶಿಖರವಾಗಿದ್ದು, ಕಬ್ರು ಪರ್ವತ, ಸಿಂಬ್ರಾಮ್ ಪರ್ವತ, ಪಾಂಡಿಮ್ ಪರ್ವತ ಮತ್ತು ನಾರ್ಶಿಂಗ್ ಪರ್ವತಗಳೊಂದಿಗೆ. ಲೆಪ್ಚಾ ಜನರು ಈ ಐದು ಪರ್ವತಗಳನ್ನು ಚು ಫಟ್ ನೃತ್ಯದ ಮೂಲಕ ಪೂಜಿಸುತ್ತಾರೆ. ಬೆಣ್ಣೆ ದೀಪಗಳು ಮತ್ತು ಬಿದಿರಿನ ಹೆಣಗಳನ್ನು ಚು ಫಟ್ ನೃತ್ಯದಲ್ಲಿ ರಂಗಪರಿಕರವಾಗಿ ಬಳಸಲಾಗುತ್ತದೆ. ಈ ಪೂಜೆಗಳು ಪರ್ವತಗಳ ಉಡುಗೊರೆಗಳನ್ನು ಸಂಕೇತಿಸುತ್ತವೆ.

# ಸಂಪಾದಕೀಯ

ಕರಾವಳಿ ತರಂಗಿಣಿ

## ಗ್ಯಾರಂಟಿ ಗಮತ್ತು...

– ಲಲಿತಶ್ರೀ ಪ್ರೀತಮ್ ರೈ



ಒಂದು ವರ್ಗದವರಿಂದ ತೆರಿಗೆ ರೂಪದಲ್ಲಿ ಹಣ ಕಿತ್ತು ಇನ್ನೊಂದು ವರ್ಗಕ್ಕೆ ಗ್ಯಾರಂಟಿ ರೂಪದಲ್ಲಿ ಕೊಡುತ್ತಿದ್ದಾರೆ ಎನ್ನುವ ಆರೋಪ ಸಿದ್ದರಾಮಯ್ಯ ಸರಕಾರದ ಮೇಲೆ ವಿರೋದ ಪಕ್ಷಗಳ ಜೊತೆಗೆ ಜನಸಾಮಾನ್ಯರ ಕಡೆಯಿಂದಾನೂ ಕೇಳಿ ಬರುತ್ತಾ ಇದೆ. ಇತ್ತೀಚೆಗೆ ಗೃಹಲಕ್ಷ್ಮಿ ಯೋಜನೆಯಡಿ ಬಂದ ಹಣದಲ್ಲಿ ಗ್ರಾಮಸ್ಥರಿಗೆ ಹೋಳಿಗೆ ಊಟ ಹಾಕಿದ ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಸುಟ್ಟಟ್ಟಿಯ ವೃದ್ಧೆ ಅಕ್ಕಾತಾಯಿ ಲಂಗೂಟಿ ಎನ್ನುವ ಸುದ್ದಿ ಇದಕ್ಕೆ ಪುಷ್ಟಿ ನೀಡುತ್ತಿದೆ. ಈ ಗ್ಯಾರಂಟಿ ನಿಜವಾಗಿಯೂ ಇಂತಹ ಜನರಿಗೆ ಅಗತ್ಯವೇ ಎನ್ನುವ ಪ್ರಶ್ನೆಯನ್ನು ಸಿದ್ದರಾಮಯ್ಯನ್ನನ್ನೂ ಸೇರಿಸಿ ಪಕ್ಷದ ನಾಯಕರು ತಮಗೆ ತಾವೇ ಕೇಳಿಕೊಳ್ಳಬೇಕಾಗಿದೆ. ಹಳ್ಳಿಗಳಲ್ಲಿ ತಮಗೆ ಬರುವ ಅನ್ನಭಾಗ್ಯದ ಅಕ್ಕಿಯನ್ನು ಮಾರುತ್ತಿದ್ದಾರೆ ಜನ. ಅಂದರೆ ಅವರಿಗೆ ಆ ಅಕ್ಕಿಯ ಅಗತ್ಯ ಇಲ್ಲ. ಇನ್ನು ಒಂದು ಹೆಂಗಸು ಬರುವ ಹಣವನ್ನು ಉಳಿತಾಯ ಮಾಡಿ ಹೋಳಿಗೆ ಊಟ ಹಾಕಿಸುವಷ್ಟು ಸಿರಿವಂತಳಾದರೆ ಅಂತವರಿಗೆ ಯಾಕೆ ಬೇಕು ಗ್ಯಾರಂಟಿಯ ಹಣ. ಎಷ್ಟೋ ಕಡೆ ಹಲವಾರು ಎಕರೆ ಭೂಮಿ ಹೊಂದಿರುವ, ಕೋಟಿಗಟ್ಟಲೆ ಆಸ್ತಿ ಹೊಂದಿರುವ ಹೆಂಗಸರ ಅಕೌಂಟಿಗೆ ಬಂದು ಬೀಳುತ್ತಿದೆ ಈ ಗೃಹಲಕ್ಷ್ಮಿಯ ಹಣ. ಅವರು ಆ ಹಣದಿಂದ ತನ್ನ ಸಂಸಾರವನ್ನು ಸಾಕಿ ಸಲಹಬೇಕಾಗಿಲ್ಲ. ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳುತ್ತಾರೆ "ಗೃಹಲಕ್ಷ್ಮಿಯರಿಗೆ ಬೆಲೆಯೇರಿಕೆಯ ಬಿಸಿ ತಟ್ಟದಿರಲಿ ಎಂಬ ಸದುದ್ದೇಶದಿಂದ ನಾವು ಜಾರಿಗೊಳಿಸಿರುವ ಗೃಹಲಕ್ಷ್ಮಿ ಯೋಜನೆ ಇಂದು ಬಹಳಷ್ಟು ಕುಟುಂಬಗಳ ಪಾಲಿಗೆ ಅಕ್ಷರಶಃ ವರದಾನವಾಗಿದೆ. ಗೃಹಲಕ್ಷ್ಮಿಯ ಹಣ ಮಕ್ಕಳ ವಿದ್ಯಾಭ್ಯಾಸ, ಮನೆಗೆ ದಿನಸಿ, ಹಬ್ಬಕ್ಕೆ ಬಟ್ಟೆ, ಆಸ್ಪತ್ರೆ ಖರ್ಚು ವೆಚ್ಚ ಭರಿಸಲು ಬಳಕೆಯಾಗುತ್ತಿದೆ" ಆದರೆ ನಮ್ಮ ಸಿ ಎಮ್ ಹೇಳಿರುವ ಹಾಗೇ ಈ ಗೃಹಲಕ್ಷ್ಮಿ ಹಣ ಬೆಲೆ ಏರಿಕೆಯ ಬಿಸಿ ತಟ್ಟಿರುವ, ಅವಶ್ಯಕತೆಗಳನ್ನು ಪೂರೈಸಿಕೊಳ್ಳಲಾಗದ ಮನೆಯವರಿಗೆ ಮಾತ್ರ ಸಿಗುತ್ತಿರುವುದಲ್ಲ. ಉದಾಹರಣೆಗೆ ಕೆಲವು ಹೆಂಗಸರ ದುಡ್ಡು ಸೀದಾ ಬ್ಯೂಟಿ ಪಾರ್ಲರ್‌ಗಳಿಗೂ ಹೋಗುತ್ತಿದೆ. ಈ ಬ್ಯೂಟಿ ಪಾರ್ಲರ್ ಹೆಂಗಸರ ಅವಶ್ಯಕತೆಯನ್ನು ಯಾವ ರೀತಿ ಪೂರೈಸುತ್ತಿದೆ ಎನ್ನುವುದು ಯೋಚಿಸಬೇಕಾಗಿರುವುದು. ಮದ್ಯಮ ವರ್ಗದ ಜನ ಹೊಟ್ಟೆ ಬಟ್ಟೆ ಕಟ್ಟಿ ತೆರಿಗೆ ಪಾವತಿಸುತ್ತಾರೆ. ಎಷ್ಟೋ ಸಲ ಸಾಲ ಮಾಡಿ ತೆರಿಗೆ ಪಾವತಿ ಮಾಡುವ ಸಂದರ್ಭಗಳೂ ಕೂಡ ಇದೆ. ಅಂತಹ ಕಷ್ಟದ ಹಣವನ್ನು ಸರಕಾರ ಅಭಿವೃದ್ಧಿಯ ಬದಲು ಜನರ ಶೋಕಿಗೆ ಖರ್ಚು ಮಾಡುತ್ತಿರುವುದು ಬೇಜಾರಿನ ಸಂಗತಿ. ಅಂದ ಮಾತ್ರಕ್ಕೆ ನೂರರಲ್ಲಿ ನೂರು ಜನ ಶೋಕಿಗೆ ಬಳಸುತ್ತಿದ್ದಾರೆ ಎಂದಲ್ಲ ಐವತ್ತರಷ್ಟು ಜನ ತಮ್ಮ ಅವಶ್ಯಕತೆಗಳಿಗೋಷ್ಕರ ಗ್ಯಾರಂಟಿ ಉಪಯೋಗಿಸಕೊಳ್ಳುವವರು ಇದ್ದಾರೆ. ಅಂತವರಿಗೆ ಇದರ ಅಗತ್ಯ ಇದೆ. ಆದರೆ ಅಗತ್ಯವೇ ಇಲ್ಲದವರಿಗೆ ಯಾಕೆ ಬೇಕು. ಒಂದು ಕಡೆ ವಿದ್ಯುತ್ ಪುಕ್ಕಟೆಯಾಗಿ ದೊರಕುತ್ತಿದೆ, ಇನ್ನೊಂದೆ ಅನ್ನ ಭಾಗ್ಯದ ಅಕ್ಕಿ, ಇನ್ನೊಂದೆಡೆ ಗ್ರಹಲಕ್ಷ್ಮಿಯ ಎರಡು ಸಾವಿರ, ಊರೂರು ಸುತ್ತುವುದಕ್ಕೆ ಸಾರಿಗೆ ವ್ಯವಸ್ಥೆ. ಇದರಿಂದ ಅನುಕೂಲಕ್ಕಿಂತ ಅನಾನುಕೂಲಗಳೇ ಎನ್ನುವುದು ಜನ ಸಾನಾನ್ಯರ ಅಂಬೋಣ. ಹಳ್ಳಿಗಳಲ್ಲಿ ಹೊಲ ಗದ್ದೆಯ ಕೆಲಸಕ್ಕೆ ಕೂಲಿಯಾಳುಗಳು ಸಿಗದೆ ರೈತರು ಪರದಾಡುವಂತಾಗುತ್ತಿದೆ. ತಿಂಗಳಲ್ಲಿ ಇಪ್ಪತ್ತರಿಂದ ಇಪ್ಪತ್ತೈದು ದಿನ ದುಡಿಯುತ್ತಿದ್ದ ಕೂಲಿಯಾಳು ಇಂದು ತಿಂಗಳಲ್ಲಿ ಹತ್ತು ದಿನ ಕೆಲಸಕ್ಕೆ ಬರಬೇಕಾದರೆ ಅವರ ಕೈಕಾಲು ಹಿಡಿಯಬೇಕಾಗಿದೆ. ಎಲ್ಲಾ ಸವಾಲತ್ತುಗಳು ಕಾಲ ಬಳಿ ಬರಬೇಕಾದರೆ ಹೊಲ ಗದ್ದೆಯಲ್ಲಿ ಕೆಲಸ ಮಾಡಿ ಕೈ ಕೆಸರು ಯಾಕೆ ಮಾಡಿಕೊಳ್ಳಬೇಕು, ಬಾಯಿ ಮೊಸರು ಮಾಡಲು ಸಿದ್ದರಾಮಯ್ಯ ಇದ್ದಾರಲ್ವಾ ಎನ್ನುವ ಮಟ್ಟಿಗೆ ಜನ ಸೋಮಾರಿಗಳಾಗುತ್ತಿರುವುದಂತೂ ಸತ್ಯ. ಇನ್ನು ಅಕ್ಕ ತಾಯಿಯಮ್ಮ ಹೋಳಿಗೆ ಊಟ ಬಡಿಸುವುದಕ್ಕೆ ಕಷ್ಟ ಬೀಳಬೇಕೆ?. ಅಕ್ಕತಾಯಿಯಮ್ಮ ಹೋಳಿಗೆ ಓಟ ಹಾಕಿಸಿ ಪ್ರಸಿದ್ದರಾಗಿ ಬಿಟ್ಟಿದ್ದಾರೆ. ಆದರೆ ಒಂದೊತ್ತು ಊಟಕ್ಕೆ ಕಷ್ಟ ಬೀಳುವ ಕುಟುಂಬಗಳು ಇಂದಿಗೂ ಇದೆ. ಮಕ್ಕಳು ಉತ್ತಮ ವಿದ್ಯಾಭ್ಯಾಸದಿಂದ ವಂಚಿತರಾಗುತ್ತಿದ್ದಾರೆ. ಎಷ್ಟೋ ಗಂಡು ಮಕ್ಕಳಿಗೆ ಬಸ್ಸಿನಲ್ಲಿ ಶಾಲಾ ಕಾಲೇಜಿಗೆ ಹೋಗುವುದಕ್ಕೆ ಕಾಸಿಲ್ಲ. ಅಂತಹ ಪರಿಸ್ಥಿತಿಯಲ್ಲಿರುವವರಿಗೆ ಈ ಗ್ಯಾರಂಟಿಗಳ ಅಗತ್ಯ ಇದೆಯೇ ಹೊರತು ಬೇಕಾದಷ್ಟು ಆಸ್ತಿ ಇದ್ದು, ಹೊಟ್ಟೆ ತುಂಬಾ ಉಂಡು ನೆಮ್ಮದಿಯಾಗಿ ಬದುಕುವವರಿಗೆ ಅಲ್ಲ. ಶಾಸಕರಿಗೆ ಅನುದಾನಗಳು ದೊರಕುತ್ತಿಲ್ಲ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿದೆ ಎನ್ನುವ ಆರೋಪಗಳು ಇದೆ. ಇದರ ಕಡೆ ಸರಕಾರ ಗಮನಹರಿಸುವುದು ಬಿಟ್ಟು, ಗ್ಯಾರಂಟಿಯಿಂದ ಗಮ್ಮತ್ತು ಮಾಡಿ ಜನ ಸೋಮಾರಿಗಳಾಗುವ ಹಾಗೆ ಮಾಡಿದರೆ ಮುಂದಿನ ಪೀಳಿಗೆಗೆ ನಾವು ಏನು ಉಡುಗೊರೆ ಕೊಡುವಂತಾಗುತ್ತದೆ.

ವೈದ್ಯೋನಾರಾಯಣೋ ಹರಿಃ

# ಜೇನು ತುಪ್ಪ




ಸಹಸ್ರಾರು ವರ್ಷಗಳಿಂದ ಜೇನುತುಪ್ಪ ಅಡುಗೆ ಮನೆಯಲ್ಲಿ ಮಾತ್ರವಲ್ಲದೆ, ಧಾರ್ಮಿಕವಾಗಿ, ಔಷಧೀಯವಾಗಿ ಬಹಳಷ್ಟು ಪ್ರಯೋಜನಕಾರಿಯಾಗಿದೆ. ಜಗತ್ತಿನಾದ್ಯಂತ ಜೇನು ತುಪ್ಪ ಹಲವಾರು ವಿಧದಲ್ಲಿ ಉಪಯೋಗಿಸಲ್ಪಡುತ್ತಿದೆ.

ಜೇನುತುಪ್ಪವನ್ನು ನೀರಿನಲ್ಲಿ ಬೆರೆಸಿ ಕುಡಿದರೆ, ಅದು ರಕ್ತದ ಕೆಂಪು ರಕ್ತಕಣಗಳ ಸಂಖ್ಯೆಯ ಮೇಲೆ ಪ್ರಯೋಜನಕಾರಿ ಪರಿಣಾಮವನ್ನು ಬೀರುತ್ತದೆ. ತುಸು ಬೆಚ್ಚಗಿನ ನೀರಿನ ಜೊತೆ ಜೇನು ತುಪ್ಪವನ್ನು ಸೇರಿಸಿ ಸೇವಿಸಿದರೆ, ರಕ್ತದ ಹಿಮೋಗ್ಲೋಬಿನ್ ಮಟ್ಟವು ಹೆಚ್ಚಾಗಿ, ರಕ್ತಹೀನತೆಯನ್ನು ಗುಣಪಡಿಸುತ್ತದೆ

ಜೇನುತುಪ್ಪದಲ್ಲಿ ಡೆಕ್ಟ್ರಿನ್ ಎಂಬ ಪಿಷ್ಟದ ನಾರು ಇದ್ದು, ಇದು ದೇಹದ ರಕ್ತದಲ್ಲಿನ ಸಕ್ಕರೆಯ ಪ್ರಮಾಣವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

1–3 ಚಮಚಗಳಷ್ಟು ಜೇನುತುಪ್ಪವನ್ನು ಒಂದು ಲೋಟ ನೀರಿನಲ್ಲಿ ಬೆರಸಿ, ದಿನಕ್ಕೆ ಎರಡು ಬಾರಿಯಂತೆ ಸೇವಿಸುತ್ತ ಬಂದರೆ, ಅಂಗಾಂಶಗಳು ಪೋಷಣೆಗೊಂಡು ನರಮಂಡಲದ ದೌರ್ಬಲ್ಯವನ್ನು ನಿವಾರಿಸಲು ಸಹಾಯ ಮಾಡುತ್ತದೆ.

3 ಚಮಚಗಳಷ್ಟು ಜೇನುತುಪ್ಪವನ್ನು ಒಂದು ಲೋಟ ಬೆಚ್ಚಗಿನ ನೀರಿನಲ್ಲಿ ಬೆರೆಸಿ ಕುಡಿದಾಗ, ಅದು ತ್ವರಿತ ಶಕ್ತಿಯನ್ನು ಒದಗಿಸುತ್ತದೆ ಹಾಗೂ ದೇಹದ ತೂಕ ನಿರ್ವಹಣೆಯಲ್ಲಿ ಸಹಾಯ ಮಾಡುತ್ತದೆ.

ತರಚು ಗಾಯದ ಮೇಲೆ ಜೇನುತುಪ್ಪವನ್ನು ಹಚ್ಚಿದರೆ, ಅದು ಗಾಯವನ್ನು ಬೇಗ ಗುಣ ಮಾಡುತ್ತದೆ ಹಾಗೂ ಗಾಯದ ಕಲೆಯನ್ನು ಕಡಿಮೆ ಮಾಡುತ್ತದೆ.

ದಿನಕ್ಕೆರಡು ಬಾರಿ, ಜೇನುತುಪ್ಪ ಮತ್ತು ತಾಜಾ ನಿಂಬೆಯ ರಸವನ್ನು ಮುಖಕ್ಕೆ ಹಚ್ಚಿ, 20 ನಿಮಿಷಗಳ ನಂತರ ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ. ಇದರಿಂದ ಮುಖದ ಮೇಲಿರುವ ಕಪ್ಪು ಕಲೆಗಳನ್ನು ತೆಗೆದುಹಾಕಬಹುದು.

ಶುಂಠಿಯನ್ನು ಜಜ್ಜಿ, ಅದರ ರಸವನ್ನು ತೆಗೆಯಿರಿ, 15 ನಿಮಿಷಗಳ ಕಾಲ ಇದನ್ನು ಒಂದು ಗಾಜಿನ ಬಟ್ಟಲಿನಲ್ಲಿ ಇಟ್ಟು, ಆಮೇಲೆ, ತಳ ಸೇರಿದ್ದನ್ನು ಹಾಗೆ ಬಿಟ್ಟು, ರಸವನ್ನು ಎರಡು ಚಮಚ ಜೇನುತುಪ್ಪದ ಜೊತೆ ಸೇರಿಸಿ, ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವಿಸಿದರೆ ರಕ್ತವನ್ನು ಶುದ್ಧೀಕರಿಸಲು ಸಹಾಯ ಮಾಡುತ್ತದೆ.

# ಕ್ಷೇತ್ರದರ್ಶನ

ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನಲ್ಲಿರುವ ಜೋಗದಿಂದ ಸುಮಾರು 12 ಕಿ.ಮೀ. ದೂರದಲ್ಲಿರುವ ವಡಂಬೈಲು ಎಂಬಲ್ಲಿ ಈ ಪದ್ಮಾವತಿ ಕ್ಷೇತ್ರವಿದೆ. ಶರಾವತಿ ವಿದ್ಯದ್ಗಾರದ ಕಡೆ ಪ್ರದೇಶವಾದ್ದರಿಂದ ಜೋಗದಿಂದ ಮೊದಲು ಅನುಮತಿ ಪತ್ರವನ್ನು ತೆಗೆದುಕೊಂಡು ಹೋಗಬೇಕು. ಚೆಕ್ ಪೋಸ್ಟ್ ಕೂಡ ಇದೆ. ಪ್ರಕೃತಿಯ ಮಡಿಲಲ್ಲಿ ಶ್ರೀ ಪದ್ಮಾವತಿ ಅಮ್ಮನವರ ದೇವಾಲಯವಿದೆ. ಶರಾವತಿ ತಟದಲ್ಲಿರುವ ಈ ದೇವಾಲಯ ಶರಾವತಿಯ ಹಿನ್ನೀರಿನಿಂದ ಆವೃತವಾಗಿದೆ. ದೇವಾಲಯದ ಸುತ್ತಮುತ್ತಲ ಪ್ರದೇಶ ಹಸಿರು ವನರಾಶಿಯಿಂದ ಕಂಗೊಳಿಸುತ್ತಿದೆ. ಶಾಂತಿ ಧಾಮವಾಗಿರುವ ಈ ದೇವಾಲಯವು ಜೈನ ಪರಂಪರೆಯ ಇತಿಹಾಸವನ್ನು ಹೊಂದಿದೆ. ಅತಿ ಎತ್ತರವಾಗಿರುವ ಆದಿಶೇಷನ ವಿಗ್ರಹವೂ ಇಲ್ಲಿ ಇದೆ. ಈ ದೇವಾಲಯಕ್ಕೆ ರಾಜ್ಯದ ಅನೇಕ ಕಡೆಗಳಿಂದ ಭಕ್ತಾದಿಗಳು ಬರುತ್ತಾರೆ. ಇಲ್ಲಿ ಬಂದ ಭಕ್ತಾದಿಗಳಿಗೆ ವಸತಿ ಊಟದ ವ್ಯವಸ್ಥೆಯೂ ಇದೆ. ವಡನಬೈಲು ಪದ್ಮಾವತಿ ದೇವಿಯು ಹಲವು ಪವಾಡಗಳಿಗೆ ಸಾಕ್ಷಿಯಾಗಿದ್ದಾಳೆ. ಶ್ರೀ ಪದ್ಮಾವತಿಯ ಮೂಲ ಊರು ಹೆಬ್ಬೈಲು. ಲಿಂಗನಮಕ್ಕಿ ಜಲಾಶಯ ಕಟ್ಟಿದ ನಂತರ ಹೆಬ್ಬೈಲು ಮುಳುಗಡೆಯಾಯ್ತು.




ಬಳೆ ಪದ್ಮಾವತಿಯಮ್ಮ

ಅದಾದ ನಂತರ 1952 ರಲ್ಲಿ ಇವರ ತಂದೆ ಮನೆ ದೇವರ ಮೂರ್ತಿ ತಂದು ಇಲ್ಲಿಟ್ಟು ತೀರಿ ಹೋದರಂತೆ. ಆದರೆ ದೇವಿಯ ಪೂಜೆಯ ಜವಾಬ್ದಾರಿಯನ್ನು ರಾಜಯ್ಯನವರು ತೆಗೆದುಕೊಳ್ಳಲಿಲ್ಲ. ಇದ್ದ ಕೆಪಿಸಿ ನೌಕರಿಯನ್ನೇ ಮುಂದುವರಿಸಿದ್ರು. ನಂತರ ಅವರಿಗೆ ಹಲವಾರು ಸಮಸ್ಯೆಗಳು ಕಾಡತೊಡಗಿದವು. ತಮ್ಮ ಉದ್ಯೋಗದಲ್ಲಿ ತಾವು ನಿರತರಾಗಿದ್ದರಿಂದ ರಾಜಯ್ಯನವರಿಗೆ ನಿತ್ಯ ಪೂಜೆ ಸಾಧ್ಯವಾಗುತ್ತಿರಲಿಲ್ಲ. ಪೂಜಾ ಸಮಯದಲ್ಲಿ ಅವರು ತಲೆ ತಿರುಗಿ ಬೀಳಲು ಆರಂಭಿಸಿದರು. ಈ ಬಗ್ಗೆ ಹಲವು ಕಡೆ ವಿಚಾರಿಸಿದಾಗ ಮನೆ ದೇವರಿಂದಲೇ ತೊಂದರೆ ಇದೆ ಎಂದು ತಿಳಿದು ಬಂತು. ಅಂದಿನಿಂದ ಉದ್ಯೋಗಕ್ಕೆ ಹೋಗುವ ಮುನ್ನ ಪೂಜಾ ಕೈಂಕರ್ಯಗಳನ್ನು ಮುಗಿಸಲು ಆರಂಭಿಸಿದರು ರಾಜಯ್ಯನವರು ಆದರೂ ಕೂಡ ಸಮಸ್ಯೆಗಳು ನಿಲ್ಲಲಿಲ್ಲ. ಕೊನೆಗೇ ಉದ್ಯೋಗವನ್ನೇ ಬಿಟ್ಟ ರಾಜಯ್ಯನವರು ಸಂಪೂರ್ಣವಾಗಿ ದೇವಿಯ ಪೂಜಾ ಸೇವೆಯಲ್ಲಿ ತೊಡಗಿಕೊಂಡರು. ಅಂದಿನಿಂದ ಎಲ್ಲ ಸಮಸ್ಯೆಗಳು ಕೂಡ ಮಾಯವಾಯಿತಂತೆ. ಇನ್ನೊಂದು ದಂತಕತೆಯ ಪ್ರಕಾರ ಹೆಬ್ಬೈಲುವಲ್ಲಿದ್ದ ದೇವಸ್ಥಾನದಲ್ಲಿ ಪದ್ಮಾವತಿ ಹುತ್ತದಲ್ಲಿ ಹುಟ್ಟಿದ್ದಳು ಎಂದು ತಿಳಿದು ಬರುತ್ತದೆ. ಈ ದೇವಸ್ಥಾನದಲ್ಲಿ ಬಳೆಗಳೇ ಶ್ರೇಷ್ಠ. ದೇವಿಗೆ ಬಳೆಯನ್ನು ನೀಡಿ ಹರಕೆ ಹೊತ್ತುಕೊಳ್ಳುತ್ತಾರೆ. ಸಂತಾನ ಪ್ರಾಪ್ತಿ ಕೋರ್ಟ್ ಕೇಸ್, ನಾಗದೋಷ ಈ ರೀತಿಯೇ ಏನೇ ಸಮಸ್ಯೆಗಳಿದ್ದರು ಕೂಡ ಈ ವಡನಬೈಲು ಪದ್ಮಾವತಿ ದೇವಿಗೆ ಬಳೆ ಹರಕೆ ಹೊತ್ತುಕೊಂಡು ಹೋದಲ್ಲಿ ನಿರ್ವಿಘ್ನವಾಗಿ ಸಮಸ್ಯೆಗಳು ಬಗೆಹರಿಯುತ್ತವೆ ಹಾಗಾಗಿ ಬಳೆ ಪದ್ಮಾವತಿ ಎಂದು ಪ್ರಸಿದ್ಧ. ಇನ್ನು ಇದೇ ಕ್ಷೇತ್ರದಲ್ಲಿ ನೀವು ಮುಕ್ತಿ ನಾಗರ ದೇವರನ್ನು ನೋಡಬಹುದು. ಈ ನಾಗನ ವಿಗ್ರಹ 77 ಕ್ವಿಂಟಲ್ ತೂಕವಿದೆ. ಹಾಗೆ ಏಳು ಅಡಿ ಏಳು ಇಂಚು ಎತ್ತರವಿದೆ. ಜೊತೆಗೆ ಏಳು ಹೆಡೆಗಳನ್ನ ಹೊಂದಿದ್ದಾನೆ ಮುಕ್ತಿನಾಗ. ಸ್ವತಹ ಭಕ್ತರೇ ಈ ನಾಗದೇವನನ್ನ ಸ್ಪರ್ಶಸಬಹುದು. ಇಲ್ಲಿಗೆ ಬಂದು ಮುಕ್ತಿನಾಗನಿಗೆ 108 ಪ್ರದಕ್ಷಿಣೆ ಹಾಕಿ ಅಭಿಷೇಕ ಮಾಡಿದರೆ ದೋಷದಿಂದ ಮುಕ್ತಿ ಸಿಗುತ್ತದೆ ಅನ್ನೋ ನಂಬಿಕೆ ಇದೆ. ಇಲ್ಲಿ ತುಲಾಭಾರದ ಸೇವೆ ಕೂಡ ಇದೆ. ಇಲ್ಲಿ ವಿಶೇಷವಾಗಿ ನಡೆಯುತ್ತದೆ ಭೂತರಾಜರ ಆರಾಧನೆ. ಯಾರಾದರೂ ನಿಮ್ಮ ಮೇಲೆ ಮಾಟ ಮಂತ್ರ ಮಾಡಿದ್ದರೆ ಯಾರಿಂದಲಾದರೂ ಭೂತ ಪ್ರೇತದ ತೊಂದರೆ ಇದ್ದರೆ ಅವರಿಗೆ ಇಲ್ಲಿ ಪರಿಹಾರ ಸಿಗುತ್ತದೆ. ವಡನಬೈಲು ಪದ್ಮಾವತಿ ದೇವಸ್ಥಾನಕ್ಕೆ ಬಂದು ಒಳಿತು ಕಂಡವರು ಅನೇಕರು ಇದ್ದಾರೆ. ಇಂತಹ ಪವಿತ್ರ ಕ್ಷೇತ್ರಕ್ಕೆ ಒಮ್ಮೆ ಬೇಟಿ ನೀಡಿ ಪುನೀತರಾಗಲು ಮರೆಯದಿರಿ.

# ಕಾಮಧೇನು

## ಪ್ರಕೃತಿಯೇ ನಮಗೆ ದಾರಿ ದೀಪ

@ ಕೃಷ್ಣಾಮೃತ




ಪ್ರಕೃತಿ ಸೊಬಗು-ಬಿನ್ನಾನವನ್ನು ವರ್ಣಿಸುವುದು ಅಸಾದ್ಯ. ಅದೆಷ್ಟು ವರ್ಣಿಸಿದರೂ ತೃಪ್ತಿಯಾಗದ ಭಾವ ಪ್ರತಿಯೊಬ್ಬನ ಮನದಲ್ಲೂ ಮೂಡುವುದರಲ್ಲಿ ಸಂದೇಹವಿಲ್ಲ. ಅಂತಹ ಪ್ರಕೃತಿಯಲ್ಲಿ ಬೇರತಂತಹ ಎದೆಷ್ಟೋ ಚಿಕ್ಕಪುಟ್ಟ ನೀರಿನ ಜರಿಯಿಂದ ಹಿಡಿದು ಬಹು ದೊಡ್ಡದಾದ ಜಲಪಾತಗಳು ನಮ್ಮ ಕಣ್ಣಮುಂದೆ ಸಿಗುತ್ತವೆ. ಅಂತಹ ಜಲಪಾತಗಳಲ್ಲಿ ವಿಶ್ವವಿಖ್ಯಾತವಾದ, ಪ್ರಪಂಚದ ಪ್ರಸಿದ್ಧ ಜಲಪಾತಗಳಲ್ಲೊಂದಾದ "ಗೇರುಸೊಪ್ಪಿನ ಜಲಪಾತ ಅಥವಾ ಜೋಗ ಜಲಪಾತ" ಕರ್ನಾಟಕ ರಾಜ್ಯದ ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ದಟ್ಟವಾದ ಕಾಡುಹಾಗು ಗುಡ್ಡಗಳಿಂದ ಆವೃತ್ತವಾದ ಸ್ಥಳದಲ್ಲಿದೆಯಾದರೂ ಜಲಪಾತವನ್ನು ವೀಕ್ಷಿಸುವತಾಣ ಜೋಗವು ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನಲ್ಲಿದೆ. ಇದು ಶಿವಮೊಗ್ಗ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಗಡಿ ಮಧ್ಯೆ ಇರುವ ಈ ಜಲಪಾತ ಸಾಗರ ತಾಲ್ಲೂಕಿನ ತಾಳಗುಪ್ಪ ರೈಲು ನಿಲ್ದಾಣಕ್ಕೆ ಕೇವಲ 16 ಕಿಮೀ ದೂರದಲ್ಲಿದೆ. ಇದು ಒಂದು ಪ್ರಮುಖ ಪ್ರವಾಸಿ ತಾಣವೂ ಹೌದು. ಜೋಗ ಜಲಪಾತವು ಸುಮಾರು 292 ಮೀ ಎತ್ತರದಿಂದ ಭೋರ್ಗರೆಯುತ್ತಾ ಶರಾವತಿ ನದಿಯು ನಾಲ್ಕು ಸೀಳಾಗಿ ವೈಭವದಿಂದ ಅವ್ಯಾಹತವಾಗಿ ಧುಮುಕುವ ರಾಜ, ಜೋರಾಗಿ ಆರ್ಭಟಿಸುತ್ತ ಹಲವಾರು ಭಾರಿ ಚಿಮ್ಮುತ್ತ ಧುಮುಕುವ ರೋರರ್, ಬಳುಕುತ್ತಾ ಜಾರುವ ರಾಣಿ ಮತ್ತು ರಭಸದಿಂದ ಹಲವಾರು ಬಂಡೆಗಳನ್ನು ಚಿಮ್ಮುತ್ತಾ ನುಗ್ಗುವ ರಾಕೆಟ್ ಈ ನಾಲ್ಕು ಜಲ ಭಾಗಗಳಾಗಿವೆ. ಮಳೆಗಾಲದಲ್ಲಿ ಅತ್ಯಂತ ರಮಣೀಯ ರೂಪ ತಾಳುವ ಈ ಜಲಪಾತ ಬಿಳಿ ಮೋಡಗಳ ಹಿಂದೆ ಕಣ್ಣಾಮುಚ್ಚಾಲೆ ಆಡುತ್ತ ನೋಡುಗರ ಕಣ್ಮನ ಸೆಳೆಯುವುದು. ಆಲ್ಪ್ ಪರ್ವತದಲ್ಲಿರುವ ಸೆರೊಸೊಲಿ 2400 ಅಡಿ, ಎವಾನ್ಸನ್ 1200 ಅಡಿ ಮತ್ತು ಆರ್ವೆ 1100 ಅಡಿ ಇದ್ದು ಜೋಗ ಜಲಪಾತಕ್ಕಿಂತ ಎತ್ತರವಾಗಿವೆಯಾದರೂ ಅವುಗಳಲ್ಲಿ ಜೋಗದಷ್ಟು ಜಲಸಮೃದ್ಧಿ ಇಲ್ಲ. ನಯಾಗರ ಜಲಪಾತದ ನೀರಿನ ಮೊತ್ತ ಜೋಗದ್ದಕ್ಕಿಂತ ಅಧಿಕವಾಗಿದ್ದರೂ, ಅದರ ಎತ್ತರ 164 ಅಡಿ ಮಾತ್ರ. ಶರಾವತಿ ನದಿ ಹರಿದು ಧುಮುಕುವ ಕಮರಿಯ ಬಂಡೆ 250 ಗಜಗಳಷ್ಟು ಉದ್ದವಾಗಿದೆ. ಮಳೆಗಾಲದಲ್ಲಿ ಹೆಚ್ಚು ನೀರು ರಭಸದಿಂದ ಬೀಳುವ ಕಾರಣ ನೀರಿನಿಂದ ಏಳುವ ಧೂಮ ಪ್ರಪಾತವನ್ನು ಆವರಿಸಿದ್ದು ನೀರಿನ ಭೋರ್ಗರೆತದ ಶಬ್ದ ಹೃದಯವನ್ನು ಕಂಪಿಸುವಂತಿರುತ್ತದೆ. ಮಳೆಗಾಲದ ಅನಂತರದ ತಿಂಗಳುಗಳಲ್ಲಿ ನದಿಯ ಪ್ರವಾಹ ಸರಿಯಾದ ಗಾತ್ರದಲ್ಲಿರುವುದರಿಂದ ಜಲಪಾತ ನೋಡಲು ರಮ್ಯವಾಗಿರುತ್ತದೆ. ಜಲಪಾತದ ಪೂರ್ಣ ದೃಶ್ಯವನ್ನು ಶಿವಮೊಗ್ಗ ಗಡಿ ಭಾಗದಿಂದ ನೋಡಬಹುದಾಗಿದೆ. ಜಲಪಾತದ ಬಂಡೆಯ ಅಂಚುಗಳಲ್ಲಿರುವ ಪೊಟರೆಗಳಲ್ಲಿ ಕಾಡು ಪಾರಿವಾಳಗಳು ಮನೆ ಮಾಡಿಕೊಂಡು ಪ್ರಪಾತದ ಬಳಿ ಗುಂಪುಗುಂಪಾಗಿ ಹಾರುತ್ತಿರುತ್ತವೆ. ಸೂರ್ಯಕಿರಣಗಳಿಂದ ಜಲಪಾತದ ಸುತ್ತಾ ಕಾಮನ ಬಿಲ್ಲು ಅನೇಕ ವೈವಿಧ್ಯ ತಾಳುತ್ತದೆ. ಜಲಪಾತದ ಏಕತಾನದ ನಾದ ಹತ್ತಿರ ನಿಂತು ಕೇಳುವವರ ಕಿವಿಗಳಿಗೆ ಘನ ಗರ್ಜನೆಯಂತೆ ಕೇಳಿಸುತ್ತದೆ. ಅದರ ಮೇಘನಾದದ ಗಾಂಭೀರ್ಯ ನಿಸರ್ಗ ಸಂಗೀತದ ಒಂದು ನಿರುಪಮ ಮಾದರಿ. ಬೆಳದಿಂಗಳ ರಾತ್ರಿಯಲ್ಲೂ ಕಾಮನಬಿಲ್ಲು ಕಾಣಿಸುವುದುದೆಂದು ಸ್ಥಳಿಯರು ಹೇಳುತ್ತಾರೆ. ಗೇರುಸೊಪ್ಪೆ ಜಲಪಾತದ ಮಾಹಿತಿಗಳನ್ನು ಸಂಗ್ರಹಿಸಲು ಮಾರ್ಚ್ 1856ರಲ್ಲಿ ಬಂದ ಇಬ್ಬರು ಬ್ರಿಟಿಷ್ ನೌಕಾಧಿಕಾರಿಗಳ ವರದಿಯಂತೆ ಪ್ರಪಾತದ ಆಳ 829 ಅಡಿಗಳು. ಪ್ರಪಾತದ ತಳದಲ್ಲಿ ನದಿ ಕೊರೆದಿರುವ ಮಡುವಿನ ಆಳ 139 ಅಡಿಗಳು. 1869ರ ಜನವರಿಯಲ್ಲಿ ಜಲಪಾತ ಪ್ರದೇಶಕ್ಕೆ ಭೇಟಿ ನೀಡಿದ್ದ ಶ್ರೀಮತಿ ಲೂಯಿ ಬ್ರೌನಿಂಗ್ ತಿಳಿಸುವಂತೆ ಆಗ ಶಿವಮೊಗ್ಗ ಜಿಲ್ಲೆಯ ಅಂಚಿನ ಕಡೆ ಜಲಪಾತದ ಸಮೀಪದಲ್ಲಿ ಡೇರೆಯನ್ನು ಹಾಕಲು ಸಹ ಸಾಧ್ಯವಿಲ್ಲದಂತೆ ಒತ್ತಾದ ಕಾಡು ಬೆಳೆದಿತ್ತಂತೆ. ಈಗ ಜಲಪಾತದ ಎದುರಿಗೆ, ನದಿ ಭೋರ್ಗರೆದು ಸಾಗುವ ಸುಂದರವಾದ ಸ್ಥಳದಲ್ಲಿ ಪ್ರವಾಸಿ ಬಂಗಲೆ, ಉಪಹಾರ ಗೃಹ ಮತ್ತು ಅಂಚೆ ಕಚೇರಿ ಇವೆ. ಅಕ್ಟೋಬರಿನಿಂದ ಫೆಬ್ರವರಿಯವರೆಗೆ ಸಹಸ್ರಾರು ಪ್ರವಾಸಿಗಳು ಜಗತ್ಪ್ರಸಿದ್ಧವಾದ ಈ ಸ್ಥಳಕ್ಕೆ ಭೇಟಿ ನೀಡುತ್ತಾರೆ. 1930 ರ ದಶಕದ ಪೂರ್ವಭಾಗದಲ್ಲಿ ಮೈಸೂರು ಲೋಕೋಪಯೋಗಿ ಇಲಾಖೆಯಿಂದ ಜಲವಿದ್ಯುತ್ ಯೋಜನಾ ಕಾರ್ಯ ಶುರುವಾಯಿತು. ಮೊದಲ ಹಂತದ ಕೆಲಸ 1939ರಲ್ಲಿ ಜೋಗ ಜಲಪಾತದಿಂದ 24 ಕಿ. ಮಿ. ದೂರದಲ್ಲಿರುವ ಹಿರೆಭಾಸ್ಕರ ಎಂಬ ಸ್ಥಳದಲ್ಲಿ ಶುರುವಾಯಿತು. ಮೊದಲು ಕೃಷ್ಣರಾಜೇಂದ್ರ ಜಲವಿದ್ಯುತ್ ಯೋಜನೆಯೆಂದು ಕರೆಯಲ್ಪಡುತಿದ್ದ ಈ ಯೋಜನೆಯನ್ನು ನಂತರ ಮಹಾತ್ಮ ಗಾಂಧಿ ಜಲವಿದ್ಯುತ್ ಯೋಜನೆಯೆಂದು ನಾಮಕರಣ ಮಾಡಲಾಯಿತು. ಫೆಬ್ರುವರಿ 21 1949ರಲ್ಲಿ ಉದ್ಘಾಟನೆಯಾದ ಈ ವಿದ್ಯುತ್ ಸ್ಥಾವರ 120 ಮೆಗಾವ್ಯಾಟ್ ವಿದ್ಯುಚ್ಛಕ್ತಿ ಉತ್ಪಾದಿಸುವ ಕ್ಷಮತೆಯನ್ನು ಹೊಂದಿದೆ. 60ರ ದಶಕದಲ್ಲಿ ಲಿಂಗನಮಕ್ಕಿಜಲಾಶಯ ಪ್ರಾರಂಭವಾದ ನಂತರ ಈ ಯೋಜನೆಗೆ ನೀರಿನ ಮೂಲ ಕಡಿಮೆಯಾಯಿತು.

# ಕಲ್ಪವೃಕ್ಷ

@ಪ್ರೀತಂ ರೈ ಇ

## ಸಿಡಿಆರ್ ಎಂ ಒಮೆನ್

1971 ರ ಇಂಡೋ-ಪಾಕ್ ಯುದ್ಧವು ಪ್ರಾರಂಭವಾದಾಗ, ಸಿಡಿಆರ್ ಎಂ ಒಮೆನ್ ಭಾರತೀಯ ನೌಕಾಪಡೆಯ ಬ್ಲಾಕ್‌ವುಡ್-ಕ್ಲಾಸ್ ಫ್ರಿಗೇಟ್ INS ಖುಕ್ರಿಯಲ್ಲಿ ಇಂಜಿನಿಯರಿಂಗ್ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಭಾರತೀಯ ನೌಕಾಪಡೆಯ ರೇಡಿಯೋ ಪತ್ತೆ ಸಾಧನವು 03ನೇ ಡಿಸೆಂಬರ್ 1971 ರಂದು ಡಿಯು ಬಂದರಿನ ಸಮೀಪದಲ್ಲಿ ಜಲಾಂತರ್ಗಾಮಿ ನೌಕೆಯನ್ನು ಗುರುತಿಸಿತು. ದುರದೃಷ್ಟವಶಾತ್, ಫ್ಲೋಟಿಲ್ಲಾದ ಹಡಗುಗಳಲ್ಲಿ ಒಂದಾದ INS ಕುಥಾರ್ ಸಮಸ್ಯೆಯನ್ನು ಎದುರಿಸಿತು ಮತ್ತು ಸುಮಾರು 05 ಡಿಸೆಂಬರ್‌ನಲ್ಲಿ ಅದನ್ನು ಮರಳಿ ಬಂದರಿಗೆ ಕರೆದೊಯ್ಯಲಾಯಿತು. ದಿಯು ಬಳಿ ಭಾರತೀಯ ಜಲಾಂತರ್ಗಾಮಿ ನೌಕೆ ಪತ್ತೆಯಾದ ಶತ್ರು ಜಲಾಂತರ್ಗಾಮಿ ನೌಕೆಯನ್ನು ಬೇಟೆಯಾಡಲು ಮತ್ತು ನಾಶಪಡಿಸಲು ನೌಕಾಪಡೆಯ ಪ್ರಧಾನ ಕಛೇರಿಯು ಪಶ್ಚಿಮ ನೌಕಾಪಡೆಗೆ ಆದೇಶಿಸಿತು. ಈ ಆದೇಶವನ್ನು ಸ್ಕ್ವಾಡ್ರನ್ನ ಕಮಾಂಡರ್, ಕ್ಯಾಪ್ಟನ್ ಮಹೇಂದ್ರನಾಥ್ ಮುಲ್ಲಾ ಅವರಿಗೆ ರವಾನಿಸಲಾಯಿತು. ಎರಡು ಜಲಾಂತರ್ಗಾಮಿ ವಿರೋಧಿ ಯುದ್ಧ ನೌಕೆಗಳು ಡಿಸೆಂಬರ್ 08 ರಂದು ತಮ್ಮ ಕಾರ್ಯಾಚರಣೆಗಾಗಿ ಬಾಂಬೆಯಿಂದ ಹೊರಟವು ಮತ್ತು ಡಿಸೆಂಬರ್ 09 ರ ಬೆಳಿಗ್ಗೆ ಶತ್ರು ಜಲಾಂತರ್ಗಾಮಿ ನೌಕೆಯ ವರದಿಯಾದ ಸ್ಥಳವನ್ನು ಸಮೀಪಿಸಿದವು. ಪಶ್ಚಿಮ ನೌಕಾ ಕಮಾಂಡ್‌ನ ಪ್ರಕಾರ ಇದು 'ಹಂಟರ್-ಕಿಲ್ಲರ್ ಫೋರ್ಸ್' ಆಗಿತ್ತು. ಡಿಸೆಂಬರ್ 9 ರ ತಡರಾತ್ರಿಯಲ್ಲಿ, INS ಖುಕ್ರಿ ಪಾಕಿಸ್ಥಾನದ ಜಲಾಂತರ್ಗಾಮಿ PNS ಹಂಗೂರ್‌ನಿಂದ ದಾಳಿಗೊಳಗಾಯಿತು. ಟಾರ್ಪಿಡೊಗಳನ್ನು ಹಾರಿಸಿ ವಿನಾಶಕಾರಿ ಹಾನಿಯನ್ನುಂಟುಮಾಡಿತು. ವೈರಿ ಟಾ




ರ್ಪಿಡೊಗಳಿಗೆ ಭಾರತೀಯ ಹಡಗನ್ನು ಸುಲಭ ಗುರಿಯನ್ನಾಗಿ ಮಾಡಿದ್ದು, ಅದರಲ್ಲಿ ಪ್ರಯೋಗಾತ್ಮಕ ಸೋನಾರ್ ಉಪಕರಣಗಳ ಉಪಸ್ಥಿತಿಯಾಗಿದ್ದು, ಅದನ್ನು ಸಂಶೋಧನೆಗಾಗಿ ವಿಶೇಷವಾಗಿ ನಿಯೋಜಿಸಲಾಗಿತ್ತು. PNS ಹ್ಯಾಂಗೋರ್ ಸುಮಾರು ಆರು ಕಿಲೋಮೀಟರ್ ದೂರದಿಂದ ಗುಂಡು ಹಾರಿಸಬಲ್ಲದುದಾಗಿತ್ತು. INS ಖುಕ್ರಿ ಕ್ಯಾಪ್ಟನ್, ಕ್ಯಾಪ್ಟನ್ ಮಹೇಂದ್ರನಾಥ್ ಮುಲ್ಲಾ ಕೆಲವೇ ನಿಮಿಷಗಳಲ್ಲಿ ಪರಿಸ್ಥಿತಿಯನ್ನು ಮೌಲ್ಯಮಾಪನ ಮಾಡಿ, ಹಡಗನ್ನು ತ್ಯಜಿಸಲು ಆದೇಶ ನೀಡಿದರು. ಖುಕ್ರಿಯೊಳಗೆ ಎರಡು ಭಾರಿ ಸ್ಫೋಟಗಳು ಸಂಭವಿಸಿ ಹಡಗು ಕತ್ತಲೆಯಾಯಿತು. ಹಡಗು ಅದರ ಬಲಕ್ಕೆ ಓರೆಯಾಗಲು ಪ್ರಾರಂಭಿಸಿತು. ತನ್ನ ಜನರಿಗೆ ಅಪಾಯವನ್ನು ಅರಿತುಕೊಂಡ ಸಿಡಿಆರ್ ಎಂ ಒಮೆನ್ ತನ್ನ ಜನರನ್ನು ಸುರಕ್ಷಿತವಾಗಿಡಲು ಡೆಕ್‌ನ ಕೆಳಗೆ ಹೋದರು. ಈ ಮಧ್ಯೆ, ಹಡಗು ಮತ್ತೊಂದು ಟಾರ್ಪಿಡೊದಿಂದ ದಾಳಿಗೊಳಗಾಯಿತು. ಅವರ ಬದುಕುಳಿಯುವ ಸಾಧ್ಯತೆಗಳು ಕಡಿಮೆಯಾಗುತ್ತಿವೆ ಎಂಬ ವಾಸ್ತವದ ಹೊರತಾಗಿಯೂ, ಅವರು ತನ್ನ ಜನರಿಗೆ ಸುರಕ್ಷತೆಗೆ ಸಹಾಯ ಮಾಡುವುದನ್ನು ಮುಂದುವರೆಸಿದರು. ಅವರ ಜೀವನದ ಕೊನೆಯ ನಿಮಿಷಗಳಲ್ಲಿ, ಸಿಡಿಆರ್ ಎಂ ಒಮೆನ್ ಅಸಾಧಾರಣ ಧೈರ್ಯವನ್ನು ತೋರಿ, ಅನೇಕ ಜನರನ್ನು ಉಳಿಸಲು ಸಹಾಯ ಮಾಡಿದರು. ಒಟ್ಟು 67 ಜನರನ್ನು ಉಳಿಸಯಾಯಿತಾತಾದರೂ ಸಿಡಿಆರ್ ಎಂ ಒಮೆನ್ ವೀರ ಮರಣ ಹೊಂದಿದರು. ಅವರಿಗೆ ಅವರ ಅತ್ಯುತ್ತಮ ಧೈರ್ಯ, ನಾಯಕತ್ವ ಮತ್ತು ಅತ್ಯುನ್ನತ ತ್ಯಾಗಕ್ಕಾಗಿ ಮರಣೋತ್ತರವಾಗಿ ರಾಷ್ಟ್ರದ ಮೂರನೇ ಅತ್ಯುನ್ನತ ಶೌರ್ಯ ಪ್ರಶಸ್ತಿ "ವೀರ್ ಚಕ್ರ" ನೀಡಲಾಯಿತು. ಸಿಡಿಆರ್ ಮುಕಡವಿಲ್ ಒಮ್ಮನ್ ಕೇರಳದಲ್ಲಿ 01 ಜುಲೈ 1925 ರಂದು ಜನಿಸಿದರು. 1971 ರ ಹೊತ್ತಿಗೆ, ಅವರು ಗಣನೀಯ ವರ್ಷಗಳ ಸೇವೆಯನ್ನು ಸಲ್ಲಿಸಿದರು ಮತ್ತು ಕಮಾಂಡರ್ ಹುದ್ದೆಗೆ ಬಡ್ತಿ ಪಡೆದರು. ಇವರನ್ನು ಕರಾವಳಿ ತರಂಗಿಣಿ ಹೆಮ್ಮೆಯಿಂದ ನೆನಪಿಸಿಕೊಳ್ಳುತ್ತಿದೆ.

# ಪಾರಿಜಾತ

ಕರಾವಳಿ ತರಂಗಿಣಿ

ಒಂದು ಮನೆಯಲ್ಲಿ ಹುಟ್ಟಿ ಇನ್ನೊಂದು ಮನೆ ಬೆಳಗುವ ಹೆಣ್ಣು ತನ್ನ ಜೀವನದಲ್ಲಿ ಹಲವಾರು ಸವಾಲುಗಳನ್ನು ಮೆಟ್ಟಿ ನಿಂತು ಮುಂದೆ ಸಾಗಿ ಹಲವಾರು ಹೆಣ್ಣು ಮಕ್ಕಳಿಗೆ ಮಾದರಿಯಾಗಿದ್ದಾಳೆ. ಅಂತಹ ಹೆಣ್ಣು ಮಕ್ಕಳಲ್ಲಿ ಕರಾವಳಿ ತರಂಗಿಣಿಯ ಇಂದಿನ ವಿಶೇಷ ಅತಿಥಿ ಆಲ್ ಇಂಡಿಯಾ ಹಾರ್ಟ್ ಫೌಂಡೇಶನ್‌ನ ಸ್ಥಾಪಕ ಅಧ್ಯಕ್ಷರಾಗಿದ್ದ ಭಾರತದ ಮೊದಲ ಮಹಿಳಾ ಹೃದ್ರೋಗ ತಜ್ಞೆ ಪದ್ಮಾವತಿ. ಪದ್ಮಾವತಿ ಅವರು ಈಗಿನ ಮ್ಯಾನ್ಮಾರ್‌ನ ಬ್ಯಾರಿಸ್ಟರ್‌ನಲ್ಲಿ 20 ಜೂನ್ 1917 ರಂದು ಜನಿಸಿದರು. ಅವರಿಗೆ ಮೂವರು ಸಹೋದರರು ಮತ್ತು ಇಬ್ಬರು ಸಹೋದರಿಯರಿದ್ದರು. ಅದು ಎರಡನೆಯ ಮಹಾಯುದ್ಧದ ಸಮಯ 1942 ರಲ್ಲಿ ಮ್ಯಾನ್ಮಾರ್‌ನ ಮೇಲೆ ಜಪಾನ್‌ನ ಆಕ್ರಮಣದ ಸಮಯದಲ್ಲಿ ಮನೆಯ ಗಂಡಸರನ್ನು ಬಿಟ್ಟು ಪದ್ಮಾವತಿ, ಆಕೆಯ ತಾಯಿ ಮತ್ತು ಸಹೋದರಿಯರನ್ನು ಭಾರತದ ತಮಿಳುನಾಡಿನ ಕೊಯಮತ್ತೂರ್‌ಗೆ ಪಲಾಯನ ಮಾಡುವಂತೆ ಮಾಡಿತು. 1945 ರಲ್ಲಿ ಯುದ್ಧವು ಕೊನೆಗೊಂಡ ನಂತರ ಕುಟುಂಬವು ಮತ್ತೆ ಒಂದಾಯಿತು. ನಂತರ ಅವರು ರಂಗೂನ್‌ನ ರಂಗೂನ್ ವೈದ್ಯಕೀಯ ಕಾಲೇಜಿನಿಂದ MBBS ಪದವಿಯನ್ನು ಪಡೆದು, 1949 ರಲ್ಲಿ ಲಂಡನ್‌ಗೆ ತೆರಳಿದರು. ಅಲ್ಲಿ ಅವರು ರಾಯಲ್ ಕಾಲೇಜ್ ಆಫ್ ಫಿಸಿಶಿಯನ್ಸ್‌ನಿಂದ ಈ RCPನ್ನು ಪಡೆದು ನಂತರ ಎಡಿನ್‌ಬರ್ಗ್‌ನ ರಾಯಲ್ ಕಾಲೇಜ್ ಆಫ್ ಫಿಸಿಶಿಯನ್ಸ್‌ನಿಂದ ಈ RCPE ಪಡೆದರು. ಯುನೈಟೆಡ್ ಕಿಂಗ್‌ಡಂನಲ್ಲಿದ್ದ ಸಮಯದಲ್ಲಿ ಅವರು ನ್ಯಾಷನಲ್ ಹಾರ್ಟ್ ಹಾಸ್ಪಿಟಲ್, ನ್ಯಾಷನಲ್ ಚೆಸ್ಟ್ ಹಾಸ್ಪಿಟಲ್ ಮತ್ತು ನ್ಯಾಷನಲ್ ಹಾಸ್ಪಿಟಲ್, ಕ್ವೀನ್ ಸ್ಕ್ವೇರ್, ಲಂಡನ್‌ನಲ್ಲಿ ಕೆಲಸ




ಮಾಡಿದ್ದಾರೆ. ತರುವಾಯ, ತನ್ನ ಎಫ್‌ಆರ್‌ಸಿಪಿ ಮುಗಿಸಿದ ನಂತರ, ಅವರು ಮೂರು ತಿಂಗಳ ಕಾಲ ಸ್ವೀಡನ್ ಗೆ ತೆರಳಿ ಅಲ್ಲಿ ಅವರು ದಕ್ಷಿಣ ಆಸ್ಪತ್ರೆಯಲ್ಲಿ ಹೃದ್ರೋಗ ಕೋರ್ಸ್‌ಗಳನ್ನು ತೆಗೆದುಕೊಂಡರು. ಇದರ ನಡುವೆ ಅವರು ಜಾನ್ಸ್ ಹಾಪ್ಕಿನ್ಸ್ ವಿಶ್ವವಿದ್ಯಾನಿಲಯದ ಭಾಗವಾದ ಬಾಲ್ಟಿಮೋರ್‌ನ ಜಾನ್ಸ್ ಹಾಪ್ಕಿನ್ಸ್ ಆಸ್ಪತ್ರೆಯಲ್ಲಿ ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಿ, ಆಯ್ಕೆಯಾದರು. ಅಲ್ಲಿನ ಪ್ರಸಿದ್ಧ ಹೃದ್ರೋಗ ತಜ್ಞ ಹೆಲೆನ್ ಟೌಸಿಗ್ ಅವರೊಂದಿಗೆ ಅಧ್ಯಯನ ಮಾಡಲು ಹೋದರು. 1952 ರಲ್ಲಿ, ಅವರು ಹಾರ್ವರ್ಡ್ ವೈದ್ಯಕೀಯ ಶಾಲೆಗೆ ಸೇರಿದರು, ಅಲ್ಲಿ ಅವರು ಆಧುನಿಕ ಹೃದ್ರೋಗಶಾಸ್ತ್ರದ ಪ್ರವರ್ತಕ ಪಾಲ್ ಡಡ್ಲಿ ವೈಟ್ ಅವರ ಅಡಿಯಲ್ಲಿ ಅಧ್ಯಯನ ಮಾಡಿದರು. ನಂತರ ಭಾರತಕ್ಕೆ ಹಿಂತಿರುಗಿ, ಅವರು ದೆಹಲಿಯ ಲೇಡಿ ಹಾರ್ಡಿಂಜ್ ವೈದ್ಯಕೀಯ ಕಾಲೇಜಿನಲ್ಲಿ ಉಪನ್ಯಾಸಕಿಯಾಗಿ 1953 ರಲ್ಲಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು, ಅಲ್ಲಿ ಅವರು ಕಾರ್ಡಿಯಾಲಜಿ ಕ್ಲಿನಿಕ್ ಅನ್ನು ತೆರೆದರು. 1954 ರಲ್ಲಿ, ಅವರು ಭಾರತದಲ್ಲಿ ಮೊದಲ ಕೆಲವು ಮಹಿಳಾ ಹೃದ್ರೋಗಶಾಸ್ತ್ರಜ್ಞರಲ್ಲಿ ಒಬ್ಬರಾಗಿದ್ದರು. 1978 ರಲ್ಲಿ ಮೌಲಾನಾ ಆಜಾದ್ ವೈದ್ಯಕೀಯ ಕಾಲೇಜಿನ ನಿರ್ದೇಶಕರಾಗಿ ನಿವೃತ್ತರಾದರು. ನಿವೃತ್ತಿಯ ನಂತರವೂ ತನ್ನ ಸೇವೆಯನ್ನು ಮುಂದುವರಿಸಿದ್ದರು. ಪದ್ಮಾವತಿಗೆ 1992 ರಲ್ಲಿ ಭಾರತದ ಎರಡನೇ ಅತ್ಯುನ್ನತ ನಾಗರಿಕ ಗೌರವ ಪದ್ಮವಿಭೂಷಣವನ್ನು ನೀಡಲಾಯಿತು. 29 ಆಗಸ್ಟ್ 2020 ರಂದು, ಪದ್ಮಾವತಿ ಅವರು ನವದೆಹಲಿಯ ನ್ಯಾಷನಲ್ ಹಾರ್ಟ್‌ಇನ್‌ಸ್ಟಿಟ್ಯೂಟ್‌ನಲ್ಲಿ ಭಾರತದಲ್ಲಿ ನಿಧನರಾದರು. ಆಕೆಯ ಮರಣದ ಸಮಯದಲ್ಲಿ ಅವರು 103 ವರ್ಷ ವಯಸ್ಸಿನವರಾಗಿದ್ದರು ಮತ್ತು ಭಾರತದಲ್ಲಿ ವಾಸಿಸುವ ಅತ್ಯಂತ ಹಿರಿಯ ವೈದ್ಯರಾಗಿದ್ದರು.

# ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಕ್ಯಾ. ಚೌಟ

ಒಂದನೇ ಪುಟದಿಂದ......

ಈ ಅಧಿವೇಶನದಲ್ಲಿ ಕ್ಯಾ. ಚೌಟ ಅವರು "2030ಕ್ಕೆ ಐದು ವರ್ಷಗಳು-ಸುಸ್ಥಿರ ಅಭಿವೃದ್ಧಿಗಾಗಿ ಬಹುಪಕ್ಷೀಯ ಪರಿಹಾರಗಳು" ವಿಷಯದ ಮೇಲೆ ಭವಿಷ್ಯ ಭಾರತದ ರಾಷ್ಟ್ರೀಯ ನಿಲುವನ್ನು ಮಂಡಿಸಿದ್ದಾರೆ. ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಬಹುಪಕ್ಷೀಯ ಸಹಕಾರ ಮತ್ತು ಸಂಪನ್ಮೂಲಗಳ ಸ್ಥಿರತೆ ಅತ್ಯಗತ್ಯ. ಅಲ್ಲದೆ, ಭಾರತವು ಅಭಿವೃದ್ಧಿ ಹೊಂದದ ಮತ್ತು ಭೂ-ಆವೃತ ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ತನ್ನ ಬೆಂಬಲ ನೀಡುವುದನ್ನು ಮುಂದುವರಿಸುವುದಾಗಿ ಮತ್ತು ಜಾಗತಿಕ ಸಹಭಾಗಿತ್ವಕ್ಕೆ ದಕ್ಷಿಣ-ದಕ್ಷಿಣ ಸಹಕಾರದ ಮಹತ್ವವನ್ನು ಭಾರತ ಪ್ರತಿಪಾದಿಸುತ್ತಿರುವುದಾಗಿ ಹೇಳಿದರು. ಈ ಸಂದರ್ಭದ ಕುರಿತು ಪ್ರತಿಕ್ರಿಯಿಸಿದ ಕ್ಯಾ. ಚೌಟ ಅವರು, "ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತದ ಪ್ರತಿನಿಧಿಯಾಗಿ ಈ ವಿಶ್ವ ವೇದಿಕೆಯಲ್ಲಿ ಪಾಲ್ಗೊಳ್ಳುವ ಅವಕಾಶ ಲಭಿಸಿರುವುದಕ್ಕೆ ಬಹಳ ಹೆಮ್ಮೆ ತಂದಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನದಲ್ಲಿ ಭಾರತವನ್ನು ಪ್ರತಿನಿಧಿಸುವ ಅತ್ಯಂತ ಮಹತ್ತರ ಜವಾಬ್ದಾರಿಯನ್ನು ನನ್ನಂತಹ ಸಾಮಾನ್ಯ ಬಿಜೆಪಿ ಕಾರ್ಯಕರ್ತನಿಗೆ ವಹಿಸಿರುವ ನಮ್ಮ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಸಂಬಂಧಪಟ್ಟ ಪಕ್ಷದ ಎಲ್ಲ ನಾಯಕರಿಗೆ ನಾನು ಧನ್ಯವಾದಗಳನ್ನು ಅರ್ಪಿಸುತ್ತೇನೆ. ವಿಶೇಷವಾಗಿ ಗೃಹ ಸಚಿವರಾದ ಅಮಿತ್ ಶಾ, ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳಾದ ಬಿ.ಎಲ್ ಸಂತೋಷ್, ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಹಾಗೂ ಸಂಸದೀಯ ವ್ಯವಹಾರಗಳ ಸಚಿವರಾದ ಕಿರಣ್ ರಿಜಿಜು ಅವರ ನಿರಂತರ ಮಾರ್ಗದರ್ಶನ ಮತ್ತು ಬೆಂಬಲಕ್ಕೆ ಹಾಗೂ ಅದರಲ್ಲಿಯೂ ದಕ್ಷಿಣ ಕನ್ನಡ ಜನತೆಗೆ ನಾನು ಅಭಾರಿಯಾಗಿದ್ದೇನೆ ಎಂದು ಕ್ಯಾ.ಚೌಟ ಅವರು ತಿಳಿಸಿದ್ದಾರೆ.

# ಅವೈಜ್ಞಾನಿಕ ಸಮೀಕ್ಷೆ ಜನತೆಗೆ ಸಮಸ್ಯೆ ತಂದೊಡ್ಡಿದೆ- ಕಾಮತ್

ಒಂದನೇ ಪುಟದಿಂದ......

ಸಿಬ್ಬಂದಿಗಳನ್ನು ಹಾಗೂ ಶಾಲಾ ಶಿಕ್ಷಕರನ್ನು ಅವೈಜ್ಞಾನಿಕ ಸಮೀಕ್ಷೆಗೆ ಬಳಸಿಕೊಂಡಿರುವುದು ಇಡೀ ಜಿಲ್ಲೆಯ ವ್ಯವಸ್ಥೆ ಹದಗೆಡಲು ಕಾರಣವಾಗಿದೆ. ಜನನ-ಮರಣ ಪ್ರಮಾಣ ಪತ್ರಗಳು, ಕಂದಾಯ ಇಲಾಖೆಗಳ ದಾಖಲೆ ಪತ್ರಗಳು, ಲೈಸೆನ್ಸ್‌ಗಳು, ಹೀಗೆ ಜನಸಾಮಾನ್ಯರಿಗೆ ಅಗತ್ಯವಾಗಿರುವ ಯಾವುದೇ ಕೆಲಸ ಕಾರ್ಯಗಳು ನಡೆಯುತ್ತಿಲ್ಲ. ಜನರು ಪ್ರತಿದಿನ ಕಚೇರಿಗಳ ಮುಂದೆ ಸಾಲುಗಟ್ಟಿ ನಿಲ್ಲುವಂತಾಗಿದ್ದು, ಎಷ್ಟೇ ಅಗತ್ಯ ಕಾರ್ಯಗಳಿದ್ದರೂ ಹತ್ತು ದಿನ ಬಿಟ್ಟು ಬನ್ನಿ ಎಂದು ಸಾರ್ವಜನಿಕರನ್ನು ವಾಪಸ್ ಕಳಿಸಲಾಗುತ್ತಿದೆ. ಇದರಿಂದಾಗಿ ನಿಗದಿತ ಅವಧಿಯೊಳಗೆ ಶಾಲೆಗಳಿಗೆ, ವಿವಿಧ ಕಚೇರಿಗಳಿಗೆ ಅಗತ್ಯವಾಗಿ ಸಲ್ಲಿಸಬೇಕಾಗಿರುವ ಪ್ರಮುಖ ದಾಖಲೆ ಪತ್ರಗಳ ವಿಳಂಬವಾಗುತ್ತಿದ್ದು ಜನರ ಸಮಸ್ಯೆಗಳಿಗೆ ಸರ್ಕಾರವೇ ನೇರ ಕಾರಣವಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ ಇನ್ನೊಂದೆಡೆ ಕಾರ್ಮಿಕರ ಆರೋಗ್ಯ ವಿಮೆ (ಇಎಸ್‌ಐ) ಅಡಿಯಲ್ಲಿ ಚಿಕಿತ್ಸೆ ಪಡೆಯುವ ವಿಮೆದಾರರು ಹಾಗೂ ಅವರ ಕುಟುಂಬ ಸದಸ್ಯರಿಗೆ ರಾಜ್ಯ ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯದಿಂದಾಗಿ ವೈದ್ಯಕೀಯ ಸೌಲಭ್ಯ ಪಡೆಯುವಲ್ಲಿ ತೀವ್ರ ತೊಂದರೆಯಾಗುತ್ತಿದ್ದು ಇನ್ನೂ ಸಹ ಸರ್ಕಾರ ಎಚ್ಚೆತ್ತುಕೊಳ್ಳದಿರುವುದು ಖಂಡನೀಯ. ಇಎಸ್‌ಐ ಆಸ್ಪತ್ರೆಗಳು ಖಾಸಗಿ ಆಸ್ಪತ್ರೆಗಳೊಂದಿಗೆ ಮಾಡಿಕೊಂಡಿರುವ ಹೊಂದಾಣಿಕೆ ಅವಧಿಯು ಕಳೆದ ಸೆಪ್ಟೆಂಬರ್ 30ನೇ ತಾರೀಕಿನಂದು ಅಂತ್ಯಗೊಂಡಿದೆ. ಹೀಗಾಗಿ ಅಕ್ಟೋಬರ್ 1 ರಿಂದ ರೋಗಿಗಳಿಗೆ ತುರ್ತು ಸಂದರ್ಭಗಳಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಉನ್ನತ ಮಟ್ಟದ ಖಾಸಗಿ ಆಸ್ಪತ್ರೆಗಳಿಗೆ ದಾಖಲಾಗಲು ಸಾಧ್ಯವಾಗುತ್ತಿಲ್ಲ. ನಾವು ಇಎಸ್‌ಐ ಸೌಲಭ್ಯ ಹೊಂದಿದ್ದರೂ ಯಾಕೆ ಕೊಡುತ್ತಿಲ್ಲ ಎಂದು ರೋಗಿಗಳ ಸಂಬಂಧಿಕರು ಆಸ್ಪತ್ರೆಯ ವೈದ್ಯಾಧಿಕಾರಿಗಳನ್ನು ಪ್ರಶ್ನಿಸುತ್ತಿದ್ದು, ರಾಜ್ಯ ಸರ್ಕಾರದ ತಪ್ಪಿಗೆ ಅಧಿಕಾರಿಗಳು ಪರಿತಪಿಸುವಂತಾಗಿದೆ. ಈ ಬಗ್ಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರಿಗೂ ಮನವಿ ಮಾಡಲಾಗಿದೆ, ಕೇಂದ್ರ ಸರ್ಕಾರದಿಂದ ನೀಡಲ್ಪಡುವ ವೈದ್ಯಕೀಯ ಚಿಕಿತ್ಸೆ ಸೌಲಭ್ಯಗಳು ಮುಂದುವರಿದಿದ್ದು, ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಚಿಕಿತ್ಸೆಗಳು ಮಾತ್ರ ಸಿಗದೇ ರೋಗಿಗಳಿಗೆ ತೊಂದರೆಯಾಗಿದೆ ಎಂದರು.

# ಕಾಂಗ್ರೆಸ್‌ನ ನೀತಿ ಬದಲಿಸಲು ಯಾರಿಂದಲೂ ಸಾಧ್ಯವಿಲ್ಲ – ಡಿಕೆಶಿ

ಒಂದನೇ ಪುಟದಿಂದ......

ಎ ಖಾತಾ ಮಾಡುತ್ತಿದ್ದೇವೆ. ಇ ಖಾತಾ ನೀಡುತ್ತಿದ್ದೇವೆ. ಬೆಂಗಳೂರಿನ ನಾಗರಿಕರು ತಮ್ಮ ಆಸ್ತಿ ದಾಖಲೆಗಳನ್ನು ಸರಿಯಾಗಿ ಹೊಂದಿರಬೇಕು ಎಂದು ನಾವು ಈ ಪ್ರಯತ್ನ ಮಾಡುತ್ತಿದ್ದೇವೆ. ನಾವು ಯಾವುದೇ ತೀರ್ಮಾನ ಮಾಡಿದರೂ ಕಾನೂನಾತ್ಮಕವಾಗಿ ಹಾಗೂ ದೂರದೃಷ್ಟಿಯಿಂದ ಮಾಡಿರುತ್ತೇವೆ. ಇದನ್ನು ಬೇರೆ ಸರ್ಕಾರಗಳು ಬದಲಾಯಿಸಲು ಆಗುವುದಿಲ್ಲ. ರಾಜಕೀಯವಾಗಿ ಕೆಲವರು ಟೀಕೆ ಮಾಡಬಹುದು. ಅದನ್ನು ನಾನು ಸ್ವಾಗತಿಸುತ್ತೇನೆ. ಜಿಬಿಎ ಮಾಡುವಾಗಲೂ ನಾನು ಸಮಿತಿ ಮಾಡಿ ಎಲ್ಲರ ಅಭಿಪ್ರಾಯ ಸಂಗ್ರಹಿಸಿದ ನಂತರವೇ ಮುಂದುವರೆದಿದ್ದು ಎಂದರು. ಬೆಂಗಳೂರಿನಲ್ಲಿ 104 ಕಿ.ಮೀ ಉದ್ದದ ಬೆಂಗಳೂರು ಬಿಸಿನೆಸ್ ಕಾರಿಡಾರ ರಸ್ತೆ ಯೋಜನೆ ರೂಪಿಸಲಾಗಿದೆ. 40 ಕಿ.ಮೀ ಉದ್ದದ ಟನಲ್ ರಸ್ತೆ ನಿರ್ಮಿಸಲು ಮುಂದಾಗಿದ್ದೇವೆ. ಅನೇಕ ಟೀಕೆಗಳು ವ್ಯಕ್ತವಾಗುತ್ತಿವೆ. ಇದು ಸೂಕ್ತ ಪರಿಹಾರವಲ್ಲದಿದ್ದರೆ ಮುಂಬೈನಲ್ಲಿ ಈ ಯೋಜನೆ ಯಾಕೆ ಮಾಡುತ್ತಿದ್ದಾರೆ? ಜಪಾನ್, ಲಂಡನ್‌ನಲ್ಲಿ ಯಾಕೆ ಮಾಡುತ್ತಿದ್ದಾರೆ. ನೀವು ಹೆಬ್ಬಾಳ, ಕೆ.ಆರ್ ಪುರಂ ಜಕ್ಷನ್ ಸೇರಿದಂತೆ ಎಲ್ಲಿ ನೋಡಿದರೂ ಟ್ರಾಫಿಕ್ ಹೆಚ್ಚಾಗಿದೆ. ನಮ್ಮ ಸರ್ಕಾರಕ್ಕೂ ಮುನ್ನ ರಾಜ್ಯ ಹಾಗೂ ಕೇಂದ್ರದಲ್ಲಿ ಬಿಜೆಪಿ ನಾಲ್ಕು ವರ್ಷಗಳ ಅಧಿಕಾರ ಮಾಡಿತ್ತು. ಈ ಸಮಯದಲ್ಲಿ ಅವರು ಬೆಂಗಳೂರಿನ ಸಮಸ್ಯೆ ಬಗೆಹರಿಸಲು ಒಂದು ಫ್ಲೈಓವರ್, ರಸ್ತೆ ಸೇರಿದಂತೆ ಒಂದೇ ಒಂದು ಕೆಲಸ ಮಾಡಿದ್ದರೆ ಹೇಳಿ, ನನ್ನ ಹೆಸರು ಬದಲಾಯಿಸಿಕೊಂಡು ಹೋಗುತ್ತೇನೆ. ಟನಲ್ ರಸ್ತೆಗೆ ನಾಲ್ಕು ವರ್ಷಕ್ಕಿಂತ ಹೆಚ್ಚಿನ ಕಾಲಾವಕಾಶ ಬೇಕಾಗಿದೆ ಎಂದರು.

# ಬಿ.ಇಡಿ ಕೋರ್ಸ್ ದಾಖಲಾತಿಗೆ ಅರ್ಜಿ ಆಹ್ವಾನ

ಮಂಗಳೂರು – 2025-26 ನೇ ಸಾಲಿನಲ್ಲಿ ಎರಡು ವರ್ಷದ ಬಿ.ಇಡಿ ಕೋರ್ಸಿನ ವ್ಯಾಸಂಗಕ್ಕಾಗಿ ರಾಜ್ಯದ ಸರಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಬಿ.ಇಡಿ ಕಾಲೇಜುಗಳಲ್ಲಿನ ಸರಕಾರಿ ಕೋಟಾದ ಸೀಟುಗಳ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಇಲಾಖಾ ವೆಬ್‌ಸೈಟ್ www.schooleducation.karnataka.gov.in/ ಮೂಲಕ ನವೆಂಬರ್ 3 ರವರೆಗೆ ಅರ್ಜಿ ಆಹ್ವಾನಿಸಲಾಗಿದೆ.

# ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ: ಅರ್ಜಿ ಆಹ್ವಾನ

ಮಂಗಳೂರು – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮಕ್ಕಳ ದಿನಾಚರಣೆ- 2025 ರ ಪ್ರಯುಕ್ತ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 8 ವರ್ಷದೊಳಗಿನ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗಾಗಿ "ಕೆಳದಿ ಚೆನ್ನಮ್ಮ" ಶೌರ್ಯ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ. ಪ್ರಕರಣವು 2024 ರ ಆಗಸ್ಟ್ 1 ರಿಂದ 2025 ರ ಜುಲೈ 31 ರೊಳಗೆ ನಡೆದಿರಬೇಕು. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ. 10 ಸಾವಿರ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಹೆಚ್ಚಿನ ಮಾಹಿತಿಗೆ ಮತ್ತು ಮಕ್ಕಳ ದಿನಾಚರಣೆ 2024 ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ನಗರದ ಬಿಜೈ ಮೆಸ್ಕಾಂ ಬಳಿಯ ಜಿಲ್ಲಾ ಸ್ತ್ರೀಶಕ್ತಿ ಭವನದ 2ನೇ ಮಹಡಿಯಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ (ದೂರವಾಣಿ ಸಂಖ್ಯೆ: 0824-2451254 ಸಂಪರ್ಕಿಸಲು ತಿಳಿಸಿದ್ದಾರೆ.

# ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆ: ಅವಧಿ ವಿಸ್ತರಣೆ

ಮಂಗಳೂರು – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕೇಂದ್ರಗಳಲ್ಲಿ ತೆರವಾಗಿರುವ ಒಟ್ಟು 57 ಅಂಗನವಾಡಿ ಕಾರ್ಯಕರ್ತೆ ಹಾಗೂ 221 ಅಂಗನವಾಡಿ ಸಹಾಯಕಿಯರ ಗೌರವಧನ ಸೇವೆಗಳ ಹುದ್ದೆಗೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದ್ದು, 822 ಅಪೂರ್ಣ ಅರ್ಜಿಗಳು ಸ್ವೀಕೃತವಾಗಿರುವುದರಿಂದ ಅವುಗಳು ಪರಿಶೀಲನೆಗೆ ಲಭ್ಯವಾಗುವುದಿಲ್ಲ. ಅರ್ಜಿ ಸಲ್ಲಿಸಲು ಅಂತಿಮ ಅ.20ರವರೆಗೆ ಅವಧಿ ವಿಸ್ತರಿಸಲಾಗಿದೆ.

# ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಮಡಿಕೇರಿ : ಪ್ರವಾಸೋದ್ಯಮ ಇಲಾಖೆಯಿಂದ 2024-25 ಹಾಗೂ 2025-26ನೇ ಸಾಲಿನಲ್ಲಿ ಪ್ರವಾಸೋದ್ಯಮ/ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್ಸ್‌ಟ್ಯೂಟ್(ಎಫ್‌ಸಿಐ), ಮೈಸೂರು ಹಾಗೂ ಇನ್ಸ್‌ಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ (ಐಎಚ್‌ಎಂ) ಬೆಂಗಳೂರು ಅವರ ಮೂಲಕ ವಸತಿ ಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಉಪ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಸ್ಟುವರ್ಟ್ ಹಿಲ್ ರಸ್ತೆ, ಮಡಿಕೇರಿ, ಕೊಡಗು ಜಿಲ್ಲೆ 571201 ದೂ.ಸಂ.:08272-200519ಅಥವಾ ಇ-ಮೇಲ್:ddkodagutourism@gmail.comನ್ನು ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರಾದ ಬಿ.ಬಸಪ್ಪ ಅವರು ತಿಳಿಸಿದ್ದಾರೆ.

# ಯು ಟಿ ಖಾದರ್‌ಗೆ ಬೆಂಗಳೂರು ವಿಶ್ವವಿದ್ಯಾನಿಲಯದಿಂದ ಡಾಕ್ಟರೇಟ್



ಬೆಂಗಳೂರು: ಕರ್ನಾಟಕ ವಿಧಾನಸಭಾಧ್ಯಕ್ಷ ಯು ಟಿ ಖಾದರ್ ಸಹಿತ ಮೂವರು ಬೆಂಗಳೂರು ವಿಶ್ವವಿದ್ಯಾನಿಲಯದ 60ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿ ಪಡೆಯಲಿದ್ದಾರೆ. ವಿಧಾನ ಪರಿಷತ್ ಮಾಜಿ ಸದಸ್ಯ ಹಾಗೂ ಸಮಾಜಸೇವಕ ಡಿ. ಮಾದೇಗೌಡ ಹಾಗೂ ಜೆ.ಪಿ. ಅಗ್ರಿ ಜೆನೆಟಿಕ್ಸ್ ಪ್ರೈವೇಟ್ ಲಿಮಿಟೆಡ್‌ನ ಸಂಸ್ಥಾಪಕ ಹಾಗೂ ವ್ಯವಸ್ಥಾಪಕ ನಿರ್ದೇಶಕರಾಗಿರುವ ಡಾ.ಟಿ.ಬಿ. ಪ್ರಸನ್ನ ಗೌರವ ಡಾಕ್ಟರೇಟ್ ಪದವಿ ಪಡೆಯುವ ಇನ್ನಿಬ್ಬರು ಸಾಧಕರೊಂದಿಗೆ ಯು.ಟಿ.ಖಾದರ್ ಅವರು ಗೌರವ ಡಾಕ್ಟರೇಟ್ ಪದವಿ ಪಡೆಯಲಿದ್ದಾರೆ. ಬೆಂಗಳೂರಿನ ಅರಮನೆ ರಸ್ತೆಯಲ್ಲಿರುವ ಸೆಂಟ್ರಲ್ ಕಾಲೇಜು ಆವರಣದಲ್ಲಿ ಜರುಗಲಿರುವ ಘಟಿಕೋತ್ಸವದಲ್ಲಿ ಈ ಮೂವರು ಗಣ್ಯರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗುವುದು. ಕರ್ನಾಟಕ ರಾಜ್ಯಪಾಲರೂ ಹಾಗೂ ಬೆಂಗಳೂರು ವಿಶ್ವವಿದ್ಯಾನಿಲಯದ ಕುಲಾಧಿಪತಿಯಾಗಿರುವ ಥಾವರ್ ಚಂದ್ ಗೆಹ್ಲೋಟ್ ಸಮಾರಂಭದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಯಾಗಿ ಭಾಗವಹಿಸುವ ಡಿ.ಆರ್.ಡಿ.ಎಲ್.ನ ನಿವೃತ್ತ ನಿರ್ದೇಶಕ, ಪದ್ಮಶ್ರೀ ಪುರಸ್ಕೃತ ಡಾ.ಪ್ರಹ್ಲಾದ ರಾಮರಾವ್ ಘಟಿಕೋತ್ಸವ ಭಾಷಣ ಮಾಡುವರು. ರಾಜ್ಯ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಉಪಸ್ಥಿತರಿರುವರು.

# ಯೋಗಾಸನ ಸ್ಪರ್ಧೆಯಲ್ಲಿ ಆಳ್ವಾಸ್‌ಗೆ ದ್ವಿತೀಯ ಸ್ಥಾನ

ಮೂಡಬಿದಿರೆ: ಬಲ್ಮಟದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ನಡೆದ ಮಂಗಳೂರು ವಿ.ವಿ ಅಂತರ್ ಕಾಲೇಜು ಯೋಗಾಸನ ಸ್ಪರ್ಧೆಯಲ್ಲಿ ಆಳ್ವಾಸ್ ಪದವಿ ಕಾಲೇಜಿನ ಪುರುಷರ ತಂಡವು ಪ್ರಥಮ ಸ್ಥಾನವನ್ನು ಪಡೆದರೆ, ಮಹಿಳೆಯರ ತಂಡವು ದ್ವಿತೀಯ ಸ್ಥಾನವನ್ನು ಪಡೆದುಕೊಂಡರು. ಆ ಮೂಲಕ ಆಳ್ವಾಸ್ ಪದವಿ ಕಾಲೇಜಿನ ನಾಲ್ವರು ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ಅಂತರ್ ವಿವಿ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ವಿಜೇತ ಕ್ರೀಡಾಪಟುಗಳನ್ನು ಆಳ್ವಾಸ್ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ.ಮೋಹನ ಆಳ್ವ ಅಭಿನಂದಿಸಿದರು.



# ಶಾಸಕ ಭಂಡಾರಿಯವರಿಂದ ಪಕ್ಷದ ಬಲವರ್ಧನೆಗೆ ಸೂಚನೆ



ಮಂಗಳೂರು: ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್ ಶಾಸಕ ಮಂಜುನಾಥ ಭಂಡಾರಿ ವಿವಿಧ ನಿಗಮಗಳು, ಪ್ರಾಧಿಕಾರಗಳು ಮತ್ತು ಅಕಾಡೆಮಿಗಳ ಅಧ್ಯಕ್ಷರೊಂದಿಗೆ ಸಭೆ ನಡೆಸಿದರು. ಈ ಸಂದರ್ಭದಲ್ಲಿ ತಮ್ಮ ತಮ್ಮ ನಿಗಮ, ಪ್ರಾಧಿಕಾರ ಹಾಗೂ ಅಕಾಡೆಮಿಗಳಲ್ಲಿ ಎದುರಾಗುವ ಯಾವುದೇ ಸಮಸ್ಯೆಗಳಿಗೆ ಸರ್ಕಾರದಿಂದ ಸಿಗುವ ಪರಿಹಾರವನ್ನು ಒದಗಿಸಿಕೊಡಲು ನಿಮ್ಮೊಂದಿಗೆ ನಾನಿದ್ದೇನೆಂಬ ಭರವಸೆ ನೀಡಿದರು. ನಿಗಮದ ಅಧ್ಯಕ್ಷರುಗಳು ಸರ್ಕಾರದ ಅಧಿಕಾರಿಗಳು ಹಾಗೂ ಜನರೊಂದಿಗೆ ಸ್ಪಂದನಾಶೀಲವಾಗಿ ಸಮನ್ವಯತೆಯಿಂದ ವರ್ತಿಸಬೇಕೆಂದು ಈ ವೇಳೆ ಶಾಸಕರು ಸಲಹೆ ನೀಡಿದರು. ಪಕ್ಷವೂ ತಮ್ಮನ್ನು ಗುರುತಿಸಿ ನೀಡಿರುವ ಸ್ಥಾನಮಾನಗಳಿಗೆ ಪ್ರತಿಯಾಗಿ ಪಕ್ಷದ ಸಂಘಟನೆಯ ಬಲವರ್ಧನೆಗಾಗಿ ಪ್ರತಿಯೊಬ್ಬ ಅಧ್ಯಕ್ಷರು ಹೆಚ್ಚು ಸಮಯ ಮೀಸಲಿಡಬೇಕೆಂದು ಸೂಚಿಸಿದರು. ಸಭೆಯಲ್ಲಿ ದ.ಕ. ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೆ. ಹರೀಶ್ ಕುಮಾರ್ ಹಾಗೂ ದಕ್ಷಿಣ ಕನ್ನಡ ಲೋಕಸಭಾ ಅಭ್ಯರ್ಥಿ ಪದ್ಮರಾಜ್ ಆರ್ ಸೇರಿದಂತೆ ವಿವಿಧ ನಿಗಮ ಪ್ರಾಧಿಕಾರ ಹಾಗೂ ಅಕಾಡೆಮಿಯ ಅಧ್ಯಕ್ಷರುಗಳು ಉಪಸ್ಥಿತರಿದ್ದರು.

# ದ.ಕ. ಆನೆ ಕಾರ್ಯಪಡೆಗೆ 48ಸಿಬ್ಬಂದಿ-ಈಶ್ವರ ಖಂಡ್ರೆ

ಬೆಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇತ್ತೀಚೆಗೆ ಕಾಡಾನೆ ಹಾವಳಿ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಆನೆಗಳನ್ನು ಮರಳಿ ಕಾಡಿಗಟ್ಟಲು ಪ್ರತ್ಯೇಕ ಆನೆ ಕಾರ್ಯಪಡೆ ರಚಿಸಲು ಆದೇಶಿದ್ದ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ಈ ಪಡೆಗೆ 48 ಸಿಬ್ಬಂದಿ ನಿಯೋಜನೆಗೆ ಅನುಮೋದನೆ ನೀಡಿದ್ದಾರೆ. ಈ ಕಾರ್ಯಪಡೆಯ ನೇತೃತ್ವವನ್ನು ಮಂಗಳೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ವಹಿಸಲಿದ್ದು, ಪಡೆಯಲ್ಲಿ ಒಬ್ಬರು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಒಬ್ಬರು ಪಶುವೈದ್ಯಾಧಿಕಾರಿ, ಒಬ್ಬರು ವಲಯ ಅರಣ್ಯಾಧಿಕಾರಿ, ನಾಲ್ವರು ಉಪವಲಯ ಅರಣ್ಯಾಧಿಕಾರಿ ಹಾಗೂ 8ಅರಣ್ಯ ರಕ್ಷಕರು ಹಾಗೂ 32ಹೊರಗುತ್ತಿಗೆಯ ಮುಂಚೂಣಿ ಸಿಬ್ಬಂದಿ ಇರಲಿದ್ದಾರೆ. ಈ ಆನೆ ಕಾರ್ಯಪಡೆಯು ಕಾಡಾನೆಗಳು ಓಡಾಡುವ ವಸತಿ ಪ್ರದೇಶ, ರೈತರ ತೋಟ, ಜಮೀನಿನ ಬಳಿ ಗಸ್ತು ತಿರುಗಲಿದ್ದು, ಆನೆಗಳು ಕಂಡು ಬಂದಲ್ಲಿ ಕಾಡಿಗೆ ಮರಳಿಸುವ ಕಾರ್ಯವನ್ನು ತ್ವರಿತವಾಗಿ ಕೈಗೊಳ್ಳಲಿದೆ ಮತ್ತು ಆನೆಗಳ ಚಲನವಲನದ ಬಗ್ಗೆ ಕಂಟ್ರೋಲ್ ರೂಂಗೆ ಮಾಹಿತಿ ನೀಡಿ ಆ ಮೂಲಕ ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ಸಂದೇಶ ರವಾನಿಸಲು ನೆರವಾಗಲಿದೆ. ಇದರಿಂದ ರೈತರಿಗೆ ಉಂಟಾಗುತ್ತಿದ್ದ ಬೆಳೆ ಹಾನಿ ತಪ್ಪಿಸಲು ಮತ್ತು ಅಮೂಲ್ಯ ಜೀವ ಉಳಿಸಲು ಸಹಕಾರಿ ಆಗಲಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.



# ದ.ಕನ್ನಡಕ್ಕೆ 38 ಕಡೆ ಆಯುಷ್ಮಾನ್ ಭಾರತ್ ಕೇಂದ್ರ : ಕ್ಯಾಪ್ಟನ್ ಚೌಟ



ಮಂಗಳೂರು: ಪ್ರಧಾನಮಂತ್ರಿ ಮೋದಿ ಸರ್ಕಾರದ ಆಯುಷ್ಮಾನ್ ಭಾರತ್ ಆರೋಗ್ಯ ಮೂಲಸೌಕರ್ಯ ಮಿಷನ್ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ದ.ಕ. ಜಿಲ್ಲೆಯಲ್ಲಿ 38 ಕಡೆ ಆಯುಷ್ಮಾನ್ ಭಾರತ್- ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ಸ್ಥಾಪನೆಗೆ ಒಟ್ಟು 24.70 ಕೋಟಿ ರೂ. ಅನುದಾನ ಮಂಜೂರಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಗ್ರಾಮೀಣ ಭಾಗದಲ್ಲಿ ಆರೋಗ್ಯ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಉದ್ದೇಶದಿಂದ ಪ್ರಧಾನಿ ಮೋದಿ ಅವರ PMABHIM ಯೋಜನೆಯಡಿ ದ.ಕನ್ನಡ ಜಿಲ್ಲೆಯ ಬಹುತೇಕ ಎಲ್ಲ ತಾಲೂಕುಗಳಿಗೂ ಹೊಸ ಆಯುಶ್ಮಾನ್ ಭಾರತ್- ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ಸ್ಥಾಪನೆಗೆ ಅನುದಾನ ಮಂಜೂರು ಮಾಡಲಾಗಿದೆ. ಪ್ರತಿಯೊಂದು ಆಯುಷ್ಮಾನ್ ಭಾರತ್ ಹೆಲ್ತ್ ಸೆಂಟರ್ ಸ್ಥಾಪನೆಗೂ ತಲಾ 65 ಲಕ್ಷ ರೂ. ಮಂಜೂರಾಗಿದ್ದು, ಅದರಡಿ ಸೂಕ್ತ ಕಟ್ಟಡ ಸೇರಿದಂತೆ ಅಗತ್ಯ ಮೂಲಸೌಕರ್ಯ ವ್ಯವಸ್ಥೆಗಳನ್ನು ಒದಗಿಸಲಾಗುತ್ತದೆ. ಈ ನಿಟ್ಟಿನಲ್ಲಿ ಶೀಘ್ರದಲ್ಲೇ ಒಟ್ಟು 38 ಊರುಗಳಲ್ಲಿ ನೂತನ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ಸ್ಥಾಪಿಸಲು ಟೆಂಡರ್ ಪ್ರಕ್ರಿಯೆ ಕೂಡ ಪೂರ್ಣಗೊಳ್ಳಲಿದೆ ಎಂದು ಸಂಸದ ಕ್ಯಾಪ್ಟನ್ ಚೌಟ ಅವರು ಹೇಳಿದ್ದಾರೆ.

# ಜಲಜೀವನ್ ಮಿಷನ್: 525ರಲ್ಲಿ 487ಕಾಮಗಾರಿ ಪೂರ್ಣ

ಉಡುಪಿ : ಉಡುಪಿ ಜಿಲ್ಲೆಯಲ್ಲಿ ಜಲ್‌ಜೀವನ್ ಮಿಷನ್ ಯೋಜನೆ ಯಡಿ ಗ್ರಾಮೀಣ ಭಾಗದ ಪ್ರತಿ ಮನೆಗೂ ಶುದ್ಧ ಕುಡಿಯುವ ನೀರನ್ನು ಒದಗಿಸಲು ಒಟ್ಟು 525 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇವುಗಳಲ್ಲಿ 487 ಕಾಮಗಾರಿಗಳು ಪೂರ್ಣಗೊಂಡಿದ್ದು, 38 ಕಾಮಗಾರಿಗಳು ಪ್ರಗತಿ ಯಲ್ಲಿವೆ. ಈ ಮೂಲಕ ಜಿಲ್ಲೆಯಲ್ಲಿ ಶೇ.93ರಷ್ಟು ಗುರಿ ಸಾಧಿಸಲಾಗಿದೆ ಎಂದು ಜಿ.ಪಂ.ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರತೀಕ್ ಬಾಯಲ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ನಿಗದಿತ ನಳ್ಳಿನೀರಿನ ಸಂಪರ್ಕ ಒಟ್ಟು 1,80, 868 ಇದ್ದು, ಇದರಲ್ಲಿ 1,49,416 ಸಂಪರ್ಕ ನೀಡಲಾ ಗಿದೆ. ತನ್ಮೂಲಕ ಶೇ.83ರಷ್ಟು ಗುರಿ ಸಾಧನೆ ಮಾಡಲಾಗಿದೆ. ಜಿಲ್ಲೆಯಲ್ಲಿ ಒಟ್ಟು 540.76 ಕೋಟಿ ರೂ. ವೆಚ್ಚದ ಕಾಮಗಾರಿಗಳು ಪೂರ್ಣಗೊಂಡಿವೆ ಎಂದರು. ಕೇಂದ್ರ ಮತ್ತು ರಾಜ್ಯ ಸರಕಾರಗಳ ಮಹತ್ವಾಕಾಂಕ್ಷಿ ಯೋಜನೆಯಾದ ಜಲ್‌ಜೀವನ್ ಮಿಷನ್ ಯೋಜನೆಯಡಿ ನಿಗದಿಯಾಗಿರುವ ಕುಡಿಯುವ ನೀರಿನ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ಜಿಲ್ಲೆಯಲ್ಲಿ ಪ್ರತಿ ಮನೆಗೂ ನೀರಿನ ಸಂಪರ್ಕ ಒದಗಿಸಿ ಶೇ.100ರಷ್ಟು ಪ್ರಗತಿ ದಾಖಲಿಸಬೇಕು ಎಂದು ಪ್ರತೀಕ್ ಬಾಯಲ್ ಅಧಿಕಾರಿಗಳಿಗೆ ಸ್ಪಷ್ಟವಾದ ಸೂಚನೆಗಳನ್ನು ನೀಡಿದರು.




# ಸ್ವಾಭಿಮಾನಿ ಬದುಕು ನಮ್ಮದಾಗಬೇಕು – ಪ್ರತಾಪ್ ಸಿಂಹ ನಾಯಕ್



ಮಂಗಳೂರು: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಅವರು ನಮಗೆಲ್ಲ ಆದರ್ಶಪ್ರಾಯರು. ಅವರಂತೆ ಸ್ವಾಭಿಮಾನಿ ಬದುಕು ನಮ್ಮದಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಪ್ರತಾಪ್ ಸಿಂಹ ನಾಯಕ್ ಹೇಳಿದರು.ಅವರು ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಂಯುಕ್ತವಾಗಿ ನೇತ್ರಾವತಿ ಸಭಾಂಗಣದಲ್ಲಿ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿ, ಆದಿಕವಿ ಮಹರ್ಷಿ ಶ್ರೀ ವಾಲ್ಮೀಕಿಯನ್ನು ನಾವು ಭಾವನಾತ್ಮಕವಾಗಿ ಕಟ್ಟಿಕೊಳ್ಳಬೇಕು. ಅವರ ರಾಮಾಯಣ ಮಹಾಕಾವ್ಯದ ಸಾಧನೆ ಇಡೀ ಜನಾಂಗಕ್ಕೆ ಪ್ರೇರಣೆ ಆಗಬೇಕು. ತಳ ಸಮುದಾಯಗಳು ಆರ್ಥಿಕವಾಗಿ, ಸಾಮಾಜಿಕವಾಗಿ, ರಾಜಕೀಯವಾಗಿ, ಶೈಕ್ಷಣಿಕವಾಗಿ ಬೆಳೆದು ಬರಬೇಕು. ಈ ನಿಟ್ಟಿನಲ್ಲಿ ನಾವೆಲ್ಲರೂ ಜಾಗೃತರಾಗಬೇಕು ಎಂದರು. ಮೂಲ್ಕಿ ಸರಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಡಾ. ವಾಸುದೇವ ಬೆಳ್ಳೆ ಅವರು ಮಹರ್ಷಿ ವಾಲ್ಮೀಕಿಯವರ ಜೀವನ ಮತ್ತು ಬದುಕು ಕುರಿತು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ತುಳು ಅಕಾಡೆಮಿ ಅಧ್ಯಕ್ಷ ತಾರಾನಾಥ್ ಗಟ್ಟಿ, ಅಪರ ಜಿಲ್ಲಾಧಿಕಾರಿ ರಾಜು, ಜಿಪಂ. ಉಪ ಕಾರ್ಯದರ್ಶಿ ಜಯಲಕ್ಷ್ಮಿ, ಡಿಸಿಪಿ ಮಿಥುನ್, ಎ.ಎಸ್ಪಿ. ಅನಿಲ್, ಡಿ.ಡಿ.ಪಿ.ಐ ಶಶಿಧರ್, ಕೈಗಾರಿಕೆ ಜಂಟಿ ನಿರ್ದೇಶಕ ಗೋಕುಲ್ ದಾಸ್ ನಾಯಕ್, ಸುರೇಶ ಅಡಿಗ ಮತ್ತಿತರರು ಉಪಸ್ಥಿತರಿದ್ದರು. ಐ.ಟಿ.ಡಿ.ಪಿ ಯೋಜನಾ ಸಮನ್ವಯಧಿಕಾರಿ ಬಸವರಾಜು ಸ್ವಾಗತಿಸಿದರು.

# 18,500 ಶಿಕ್ಷಕರ ನೇಮಕಾತಿಗೆ ನಿರ್ಧಾರ : ಮಧು ಬಂಗಾರಪ್ಪ

ಮಂಗಳೂರು : ರಾಜ್ಯದ ಸರಕಾರಿ ಶಾಲೆಗಳಿಗೆ 13,000 ಹಾಗೂ ಅನುದಾನಿತ ಶಾಲೆಗಳಿಗೆ ಸುಮಾರು 5,500 ಸೇರಿದಂತೆ 18,500ಕ್ಕೂ ಅಧಿಕ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗಳ ಸಿದ್ಧತೆ ನಡೆದಿದೆ ಎಂದು ಶಿಕ್ಷಣ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ. ಹಿಂದಿನ ಸರಕಾರದ ಅವಧಿಯಲ್ಲಿ ಕೇವಲ 4,700 ಶಿಕ್ಷಕರ ನೇಮಕ ಮಾಡಲಾಗಿತ್ತು. ತಾನು ಶಿಕ್ಷಣ ಸಚಿವನಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಈಗಾಗಲೇ 13,000 ಸಾವಿರ ಶಿಕ್ಷಕರ ನೇಮಕಾತಿ ನಡೆದಿದ್ದು, ಮತ್ತೆ 18,500 ಶಿಕ್ಷಕರ ನೇಮಕಾತಿಗೆ ಸಿದ್ಧತೆ ನಡೆದಿದೆ. ಜಸ್ಟಿಸ್ ನಾಗಮೋಹನ್ ದಾಸ್ ವರದಿಯ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿ ವಿಳಂಬವಾಗಿತ್ತು ಎಂದರು. ಎಲ್ ಕೆಜಿಯಿಂದ 12ನೆ ತರಗತಿವರೆಗೆ ಕರ್ನಾಟಕ ಪಬ್ಲಿಕ್ ಸ್ಕೂಲ್ ಅಡಿಯಲ್ಲಿ ಶೇ. 80ರಷ್ಟು ಸರಕಾರಿ ಶಾಲೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ. ಈ ಶಾಲೆಗಳಲ್ಲಿ ಫಲಿತಾಂಶದ ಗುಣಮಟ್ಟವನ್ನು ಹೆಚ್ಚಿಸುವ ಸಲುವಾಗಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಿ ಪರೀಕ್ಷೆಯಲ್ಲಿ ನಕಲು ಮಾಡುವುದಕ್ಕೆ ಕಡಿವಾಣ ಹಾಕಲಾಗಿದೆ. ಪರೀಕ್ಷಾ ವ್ಯವಸ್ಥೆಯನ್ನು ಉಚಿತವಾಗಿ ಮಾಡುವ ಮೂಲಕ ನಾನಾ ಕಾರಣಗಳಿಂದ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಅವಕಾಶ ಕಲ್ಪಿಸಿ ಮುಂದಿನ ಭವಿಷ್ಯ ರೂಪಿಸಲು ಅನುವು ಮಾಡಿಕೊಡಲಾಗಿದೆ. ಈ ಮಾದರಿಯನ್ನು ಕೇಂದ್ರ ಸರಕಾರವೂ ಕಾಪಿ ಮಾಡಿಕೊಳ್ಳಲು ಹೊರಟಿದೆ ಎಂದು ಕೇಂದ್ರ ಸರಕಾರವನ್ನು ಕುಟುಕಿದರು.



# ಅಂಚೆ ಚೀಟಿ ಚಾರಿತ್ರಿಕ ಮಹತ್ವದ ದಾಖಲೆ – ಸುಧಾಕರ ಮಲ್ಯ




ಮಂಗಳೂರು : ಭಾರತೀಯ ಅಂಚೆ ಇಲಾಖೆ ಅಂಚೆ ಚೀಟಿ ಮೂಲಕ ಚಾರಿತ್ರಿಕ ಮಹತ್ವವನ್ನು ದಾಖಲಿಸಿ ದೇಶ ವಿದೇಶಗಳಲ್ಲಿ ಪಸರಿಸಿದೆ ಎಂದು ಭಾರತೀಯ ಅಂಚೆ ಇಲಾಖೆ ಮಂಗಳೂರು ವಿಭಾಗದ ಹಿರಿಯ ಅಂಚೆ ಅಧೀಕ್ಷಕ ಸುಧಾಕರ್ ಮಲ್ಯ ತಿಳಿಸಿದ್ದಾರೆ. ಅವರು ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸುವರ್ಣ ಸಂಭ್ರಮ ಸವಿನೆನಪಿಗಾಗಿ ಪತ್ರಿಕಾ ಭವನದಲ್ಲಿ ಹಮ್ಮಿಕೊಂಡಿದ್ದ ಅಂಚೆ ಚೀಟಿ ಬಿಡುಗಡೆ ಮಾಡಿ ಮಾತನಾಡಿ, ಅಂಚೆ ಇಲಾಖೆ ವಿವಿಧ ಸೌಲಭ್ಯಗಳನ್ನು ಸಾರ್ವಜನಿಕರಿಗೆ ನೀಡುವ ಮೂಲಕ ಜನರಿಗೆ ಅಪಘಾತ ವಿಮಾಯೋಜನೆ, ಆರೋಗ್ಯ ಸುರಕ್ಷಾ ವಿಮಾಯೋಜನೆಯ ಜೊತೆ ಅಂಚೆ ಸೇವೆಯಲ್ಲಿಯೂ ಸುಧಾರಿತ ಸೇವಾ ಸೌಲಭ್ಯಗಳನ್ನು ನೀಡುತ್ತಿದೆ. ಮೈ ಸ್ಟ್ಯಾಂಪ್ ಮೂಲಕ ಚಾರಿತ್ರಿಕ ಮಹತ್ವದ ಘಟನೆಗಳ ಸಂದರ್ಭದಲ್ಲಿ ವಿವಿಧ ಸಂಘ ಸಂಸ್ಥೆಗಳಿಗೆ ಅಂಚೆ ಚೀಟಿ ಬಿಡುಗಡೆಗೆ ಅವಕಾಶ ನೀಡಿದೆ ಎಂದು ಸುಧಾಕರ್ ಮಲ್ಯ ತಿಳಿಸಿದ್ದಾರೆ.

# ಶಿರಾಡಿ ಹೆದ್ದಾರಿ, ರೈಲು ಮಾರ್ಗ ಏಕೀಕೃತ ಯೋಜನೆ : ಕೇಂದ್ರ ಅನುಮೋದನೆ

ಮಂಗಳೂರು : ಶಿರಾಡಿ ಘಾಟ್ ಮೂಲಕ ಹಾದುಹೋಗುವ ರಸ್ತೆ ಮತ್ತು ರೈಲು ಮಾರ್ಗಗಳ ಏಕೀಕೃತ ಕಾರ್ಯ ಸಾಧ್ಯತಾ ವರದಿ ಸಿದ್ಧಪಡಿಸುವ ಕೋರಿಕೆಯನ್ನು ಕೇಂದ್ರ ಸರಕಾರ ಅನುಮೋದಿಸಿರುವುದಾಗಿ ಸಂಸದ ಕ್ಯಾ. ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಹೊಸದಿಲ್ಲಿಯಲ್ಲಿ ರಸ್ತೆ ಸಾರಿಗೆ ಸಚಿವಾಲಯದ ಕಾರ್ಯದರ್ಶಿ ಉಮಾಶಂಕರ್ ಅವರನ್ನು ಭೇಟಿಯಾಗಿ ವಿವಿಧ ಯೋಜನೆಗಳ ಬಗ್ಗೆ ಚರ್ಚೆ ನಡೆಸಿದ ಅವರು, ಶಿರಾಡಿ ಘಾಟ್ ಮೂಲಕ ಹಾದು ಹೋಗಲಿರುವ ನೂತನ ಹೆದ್ದಾರಿ ಹಾಗೂ ರೈಲು ಮಾರ್ಗ ಅಭಿವೃದ್ಧಿ ಕಾರ್ಯವನ್ನು ರೈಲು ಸಚಿವಾಲಯದ ಸಹಯೋಗದಲ್ಲಿ ಏಕೀಕೃತವಾಗಿ ಕೈಗೊಂಡರೆ ಬೆಂಗ ಳೂರು-ಮಂಗಳೂರು ಹೈಸ್ಪೀಡ್ ಸಂಪರ್ಕಕ್ಕೆ ನೆರವಾಗಲಿದೆ ಎಂದರು. ಮಂಗಳೂರು ಪೋರ್ಟ್ ಕನೆಕ್ಟಿವಿಟಿ ಯೋಜನೆಯನ್ನು ತುರ್ತಾಗಿ ರಾಷ್ಟ್ರೀಯ ಹೆದ್ದಾರಿ. ಪ್ರಾಧಿಕಾರಕ್ಕೆ ಹಸ್ತಾಂತರಿಸುವಂತೆ ಯೂ ಒತ್ತಾಯಿಸಿದರು. ಮಾಣಿ-ಸಂಪಾಜೆ ಚತುಷ್ಪಥ ಯೋಜನೆಯನ್ನು ಸಚಿವಾಲಯದ ವಾರ್ಷಿಕ ಯೋಜನೆಗೆ ಸೇರಿಸುವಂತೆ ಕೋರಿರುವುದಾಗಿ ಅವರು ತಿಳಿಸಿದ್ದಾರೆ. ಇದೇ ವೇಳೆ ಚೌಟ ಅವರು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಸ್.ಕೃಷ್ಣನ್ ಅವರನ್ನೂ ಭೇಟಿಯಾಗಿ, ಮಂಗಳೂರಿನ ಸಿಲಿಕಾನ್ ಬೀಚ್ ಯೋಜನೆ ಉದ್ಯಮದ ನೆರವಿನೊಂದಿಗೆ ಸುಧಾರಣೆ ಕಾಣುತ್ತಿರುವ ಬಗ್ಗೆ ಪ್ರಸ್ತಾಪಿಸಿದರಲ್ಲದೆ ಮಂಗಳೂರಿನ ಸರಕಾರಿ ಐಟಿಐನಲ್ಲಿ ಎಐ ಡಾಟಾ ಮತ್ತು ಸೈನ್ಸ್ ಲ್ಯಾಬ್ ಸ್ಥಾಪಿಸುವ ಕೇಂದ್ರ ಸರಕಾರದ ಘೋಷಣೆಯನ್ನು ಸ್ವಾಗತಿಸಿದ್ದಾರೆ.



# ಲಗೇಜ್ ದುಬೈಯಲ್ಲೇ ಬಿಟ್ಟು ಬಂದು ಏರ್ ಇಂಡಿಯಾದಿಂದ ಎಡವಟ್ಟು !



ಮಂಗಳೂರು: ದುಬೈಯಿಂದ ಮಂಗಳೂರಿಗೆ ಆಗಮಿಸಿದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನದಲ್ಲಿ ಹಲವು ಪ್ರಯಾಣಿಕರ ಲಗೇಜ್‌ಗಳನ್ನು ದುಬೈಯಲ್ಲೇ ಬಿಟ್ಟು ಬಂದಿರುವುದು ವರದಿಯಾಗಿದೆ. ವಿಮಾನ ಮಂಗಳೂರಿಗೆ ಬಂದು ಇಳಿದ ನಂತರ ಪ್ರಯಾಣಿಕರು ತಮ್ಮ ಲಗೇಜು ಪಡೆಯಲು ಬಂದಾಗಲೇ ಅವರಿಗೆ ನಿಮ್ಮ ಲಗೇಜು ದುಬೈಯಿಂದ ಲೋಡ್ ಆಗಿಲ್ಲ, ವಿಮಾನ ಫುಲ್ ಇದ್ದುದರಿಂದ ಕೆಲವು ಲಗೇಜ್‌ಗಳನ್ನು ಅಲ್ಲೇ ಬಿಡಲಾಗಿದೆ, ನಿಮಗೆ ನಾವು ನಾಳೆ ಬೆಳಗ್ಗೆ 5 ಗಂಟೆಗೆ ಬರುವ ವಿಮಾನದಲ್ಲಿ ಆ ಲಗೇಜ್ ದುಬೈಯಿಂದ ಬರಲಿದೆ ಅದನ್ನು ನಿಮಗೆ ತಲುಪಿಸುತ್ತೇವೆ ಎಂದು ಏರ್ ಇಂಡಿಯಾ ಎಕ್ಸ್‌ಪ್ರೆಸ್ ನ ಸಿಬ್ಬಂದಿಗಳು ಮಾಹಿತಿ ನೀಡಿದ್ದಾರೆ. ಇದರಿಂದ ಹಲವಾರು ಪ್ರಯಾಣಿಕರು ತೀವ್ರ ತೊಂದರೆಗೆ ಒಳಗಾಗಿದ್ದಾರೆ. ಒಂದೇ ದಿನಕ್ಕಾಗಿ, ಕುಟುಂಬದ ಕಾರ್ಯಕ್ರಮಕ್ಕಾಗಿ ಬಂದಿದ್ದವರು ಮತ್ತು ಮರುದಿನಕ್ಕೆ ಹಾಳಾಗುವ ವಸ್ತುಗಳನ್ನು ಲಗೇಜ್ ನಲ್ಲಿ ಇಟ್ಟವರು ಹೀಗೆ ಹಲವಾರು ಪ್ರಯಾಣಿಕರು ಏರ್ ಇಂಡಿಯಾ ಸಿಬ್ಬಂದಿಯೊಂದಿಗೆ ವಾಗ್ವಾದಕ್ಕೆ ಇಳಿದರು. ನಿಮ್ಮ ವಿಳಾಸವನ್ನು ಕೊಟ್ಟು ಹೋಗಿ ನಾವೇ ನಿಮಗೆ ತಲುಪಿಸುತ್ತೇವೆ ಎಂದು ಸಿಬ್ಬಂದಿ ಉತ್ತರಿಸಿದ್ದಾರೆ. ಆದರೆ ಸಿಬ್ಬಂದಿಯ ಉತ್ತರದಿಂದ ಪ್ರಯಾಣಿಕರು ತೃಪ್ತರಾಗಿಲ್ಲ. ಕೆಲವು ಪ್ರಯಾಣಿಕರು ಏರ್ ಇಂಡಿಯಾ ಎಕ್ಸ್‌ಪ್ರೆಸ್ ನಲ್ಲಿ ಇಂತಹ ಸಮಸ್ಯೆಗಳು ಆಗಾಗ ಆಗ್ತಾ ಇದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಸುದ್ದಿ ತುಣುಕು

ರಾಜ್ಯದಲ್ಲಿ ಇನ್ನುಮುಂದೆ ಅನ್ನಭಾಗ್ಯ ಯೋಜನೆಯ ಹೆಚ್ಚುವರಿ 5ಕೆ.ಜಿ ಅಕ್ಕಿ ಬದಲಿಗೆ ಇಂದಿರಾ ಆಹಾರ ಕಿಟ್ ವಿತರಿಸಲು ಸಚಿವ ಸಂಪುಟ ಸಭೆ ನಿರ್ಧಾರ ಕೈಗೊಂಡಿದೆ.

ರಾಜ್ಯದ ಮಹಿಳಾ ಉದ್ಯೋಗಿಗಳಿಗೆ ಪ್ರತಿ ತಿಂಗಳು ಒಂದು ದಿನದ ವೇತನ ಸಹಿತ ಋತು ಚಕ್ರ ರಜೆ ನೀಡಲು ಸರ್ಕಾರ ತೀರ್ಮಾನಿಸಿದೆ.

ಪ್ರಜ್ವಲ್ ರೇವಣ್ಣ ಮೇಲ್ಮನವಿ ವಿಚಾರಣೆಗೆ ವಿಶೇಷ ಅಭಿಯೋಜಕರ ನೇಮಕದ ಕುರಿತು ವಿವರಣೆ ನೀಡುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದೆ.

ಬಿಗ್‌ಬಾಸ್ ಪುನಾರಂಭಕ್ಕೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬೆಂಬಲ ಸೂಚಿಸಿದ ಸುದೀಪ್ ಧನ್ಯವಾದ ಅರ್ಪಿಸಿದ್ದಾರೆ.

ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಭೂಮಿ ನೀಡಿದ್ದವರಿಗೆ ಪ್ರತಿಯಾಗಿ ನಿವೇಶನ ಸಿಗದಿದ್ದಕ್ಕೆ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಣಕಾಸು ವ್ಯವಹಾರಕ್ಕೆ ಸಂಬಂಧಿಸಿದಂತೆ ನಗರದ ಗುತ್ತಿಗೆದಾರ ಮೋಹನ್ ಚವ್ಹಾಣ್ ಎಂಬವರ ಅಪಹರಣ ಪ್ರಕರಣದಲ್ಲಿ 10 ಮಂದಿ ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಹು-ಧಾ ಪೊಲೀಸ್ ಕಮೀಷನರ್ ಎನ್.ಶಶಿಕುಮಾರ್ ತಿಳಿಸಿದ್ದಾರೆ.

ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ತನಿಖಾಧಿಕಾರಿಯ ಬದಲಾವಣೆ ಕೋರಿದ್ದ ಅರ್ಜಿಯನ್ನು ಕೋರ್ಟ್ ವಜಾಗೊಳಿಸಿದೆ.

ಜಾಲಿವುಡ್ ಗೇಟ್ ತೆರೆಯಲು ಅನುಮತಿ ನೀಡಿರುವ ಹಿನ್ನೆಲೆ ಕನ್ನಡಪರ ಸಂಘಟನೆಯವರು ಪ್ರತಿಭಟನೆ ನಡೆಸಿದ್ದಾರೆ.

ಕುರುಬ ಸಮುದಾಯವನ್ನು ಎಸ್ಟಿಗೆ ಸೇರಿಸಲು ಸಿದ್ದರಾಮಯ್ಯ ಅವರ ಹಿಂದಿನ ಸರ್ಕಾರದ ಅವಧಿಯಲ್ಲೇ ಕೇಂದ್ರಕ್ಕೆ ಪ್ರಸ್ತಾಪ ಕಳುಹಿಸಲಾಗಿತ್ತು ಎಂದು ಬಿಜೆಪಿ ಸಂಸದ ಬೊಮ್ಮಾಯಿ ತಿಳಿಸಿದ್ದಾರೆ.

ಶಾಸ್ತ್ರೋಕ್ತವಾಗಿ ಹಾಸನಾಂಬ ದೇವಿಯ ಗರ್ಭಗುಡಿ ಬಾಗಿಲು ತೆರೆಯುವ ಮೂಲಕ ಈ ವರ್ಷ ಹಾಸನಾಂಬೆಯ ದರ್ಶನಕ್ಕೆ ಚಾಲನೆ ಸಿಕ್ಕಿದೆ.

ಅಡಕೆ ಬೆಳೆಗಾರರ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿರುವ ಮಲೆನಾಡು ಅಡಕೆ ಮಾರಾಟದ ಸಹಕಾರ ಸಂಘವು ಈಗ ಬ್ಯಾಂಕಿಂಗ್ ಸೇವೆಯನ್ನು ಆರಂಭಿಸಲು ನಿರ್ಧರಿಸಿದೆ.

1,200 ಚದರಡಿಯೊಳಗೆ ನಿರ್ಮಿಸಿರುವ ಕಟ್ಟಡಗಳಿಗೆ ಒಸಿ ಹಾಗೂ ಸಿಸಿ ನೀಡುವ ಸಂಬಂಧ ಎದುರಾಗುವ ಕಾನೂನಿನ ಅಡೆತಡೆ ನಿವಾರಣೆ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಅಂತಿಮ ನಿರ್ಧಾರಕ್ಕೆ ಬರಲಾಗುವುದು ಎಂದು ಡಿಸಿಎಂ ತಿಳಿಸಿದ್ದಾರೆ.

ಸುಪ್ರೀಂ ಕೋರ್ಟ್ ಸಿಜೆಐ ಗವಾಯಿ ಅವರ ಮೇಲಿನ ದಾಳಿ ಪ್ರಕರಣ ಸಂಬಂಧ ಬೆಂಗಳೂರಿನಲ್ಲಿ ಎಫ್‌ಐಆರ್ ದಾಖಲಾಗಿದೆ.

ಫರೂಕಾಬಾದ್‌ನ ಮೊಹಮ್ಮದಾಬಾದ್ ವಾಯುನೆಲೆಯಲ್ಲಿ ಅಪಘಾತ ಸಂಭವಿಸಿದ್ದು, ವಿಮಾನದಲ್ಲಿದ್ದವರು ನಿರ್ಮಾಣ ಹಂತದಲ್ಲಿರುವ ಬಿಯರ್ ಕಾರ್ಖಾನೆಯನ್ನು ಪರಿಶೀಲಿಸಲು ಭೋಪಾಲ್‌ನಿಂದ ಬಂದಿದ್ದರು.

ಬಿಹಾರ ವಿಧಾನಸಭೆ ಚುನಾವಣೆ ಈಗಾಗಲೇ ದಿನಾಂಕ ಘೋಷಣೆಯಾಗಿದ್ದು, ರಾಜಕೀಯ ಪಕ್ಷಗಳು ಜನರಿಗೆ ಭರವಸೆಗಳನ್ನು ಘೋಷಿಸಲು ಆರಂಭಿಸಿವೆ.

# ಚಿಕನ್ ಪಕೋಡ



**ಬೇಕಾಗುವ ಸಾಮಾಗ್ರಿ :**

ಬೋನ್‌ಲೆಸ್ ಚಿಕನ್ – 150 ಗ್ರಾಮ್ಸ್
ಅರಿಶಿಣ – 1 ಚಮಚ
ಕೊತ್ತಂಬರಿ ಪುಡಿ – 1/2 ಚಮಚ
ಮೆಣಸಿನ ಪುಡಿ – 1 ಚಮಚ
ಈರುಳ್ಳಿ – 1
ಕತ್ತರಿಸಿದ ಕೊತ್ತಂಬರಿ ಸೊಪ್ಪು – 1 ಮುಷ್ಟಿ
ಕಡಲೆ ಹಿಟ್ಟು – 3–4 ಚಮಚ
ಅಡುಗೆ ಸೋಡಾ – 1/2 ಚಮಚ
ಉಪ್ಪು – ರುಚಿಗೆ ತಕ್ಕಷ್ಟು
ಗರಂ ಮಸಾಲ – 1/2 ಚಮಚ
ಜೀರಿಗೆ ಪುಡಿ – 1/2 ಚಮಚ
ಮೊಟ್ಟೆ – 1

**ಮಾಡುವ ವಿದಾನ :**

ಮೊದಲಿಗೆ ಚಿಕನ್‌ನ್ನು ಚಿಕ್ಕ ತುಂಡುಗಳಾಗಿ ಮಾಡಿ ಒಂದು ಕುಕ್ಕರ್‌ನಲ್ಲಿ ಹಾಕಿ ಅದಕ್ಕೆ ಸ್ವಲ್ಪ ನೀರು, ಸ್ವಲ್ಪ ಉಪ್ಪು ಸೇರಿಸಿ, ಕುಕ್ಕರ್ ಎರಡು ವಿಸಿಲ್ ಆಗುವವರೆಗೆ ಬೇಯಿಸಬೇಕು. ನಂತರ ಚಿಕನ್‌ನ್ನು ಸೋಸಿಕೊಳ್ಳಬೇಕು. ನಂತರ ಒಂದು ಪಾತ್ರಗೆ ಅರಿಶಿಣ ಪುಡಿ, ಮೆಣಸಿನ ಪುಡಿ, ರುಚಿಗೆ ತಕ್ಕಷ್ಟು ಉಪ್ಪು, ಕೊತ್ತಂಬರಿ ಪುಡಿ, ಗರಂ ಮಸಾಲಾ ಪುಡಿ, ಅಡುಗೆ ಸೋಡಾ, ಕಡಲೆ ಹಿಟ್ಟು, ಕೊತ್ತಂಬರಿ ಸೊಪ್ಪು, ಜೀರಿಗೆ ಪುಡಿ, ಈರುಳ್ಳಿ ಹಾಗೂ ಒಂದು ಸಂಪೂರ್ಣ ಮೊಟ್ಟೆ ಒಡೆದು ಹಾಕಿ, ಅಗತ್ಯವಾದರೆ ಚಿಕನ್ ಬೇಯಿಸಿದ ನೀರು ಸೇರಿಸಿಕೊಳ್ಳಬಹುದು. ಈ ಎಲ್ಲಾ ಪದಾರ್ಥಗಳನ್ನು ಹಾಕಿಕೊಂಡ ನಂತರ, ಚೆನ್ನಾಗಿ ಮೊದಲು ಮಿಶ್ರಣ ಮಾಡಿಕೊಳ್ಳಬೇಕು. ಈಗ ಒಂದು ಬಾಣಲೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಿ, ಎಣ್ಣೆ ಚೆನ್ನಾಗಿ ಬಿಸಿಯಾದ ನಂತರ ಈಗ ಚಿಕನ್ ಮಿಶ್ರಣವನ್ನು ಎಣ್ಣೆಯಲ್ಲಿ ಹಾಕಿ, ಗರಿ ಗರಿಯಾಗಿ ಕರಿದುಕೊಂಡರೆ ರುಚಿಕರವಾದ ಚಿಕನ್ ಪಕೋಡ ಸವಿಯಲು ಸಿದ್ದ.

# ಮೋದಿಗೆ ಬುದ್ಧಿ ಕಲಿಸಬೇಕೆಂದ ಲಷ್ಕರ್ ನಾಯಕ



ನವದೆಹಲಿ: ಭಾರತವು ಪಾಕಿಸ್ತಾನದ ಮೇಲೆ ಜಲ ಭಯೋತ್ಪಾದನೆ ನಡೆಸುತ್ತಿದೆ. ಇಂತಹ ನಡೆ ಅನುಸರಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿಗೆ ಬುದ್ಧಿ ಕಲಿಸಬೇಕು ಎಂದು ಲಷ್ಕರ್ ಉಗ್ರ ಸಂಘಟನೆಯ ಉಪ ಮುಖ್ಯಸ್ಥ ಸೈಫುಲ್ಲಾ ಕಸೂರಿ ಹೇಳಿದ್ದಾನೆ. ಪಹಲ್ಗಾಮ್ ಉಗ್ರ ದಾಳಿ ರೂವಾರಿ ಕಸೂರಿಯ ವಿಡಿಯೋವೊಂದು ಪಾಕಿಸ್ತಾನದಲ್ಲಿ ವೈರಲ್ ಆಗಿದ್ದು, ಇದರಲ್ಲಿ ಭಾರತದ ವಿರುದ್ಧ ಮಾತನಾಡಿದ್ದಾನೆ ಎಂದು ಮಾಧ್ಯಮವೊಂದು ವರದಿ ಮಾಡಿದೆ. ಅಲ್ಲದೇ ಈತ ಭಾರತದ ಮೇಲೆ ಮತ್ತೊಂದು ಉಗ್ರ ದಾಳಿ ನಡೆಸುವ ಬಗ್ಗೆಯೂ ಚಿಂತನೆ ನಡೆಸಿದ್ದಾನೆ ಎಂದು ಮೂಲಗಳು ತಿಳಿಸಿವೆ.

# ಈಜಿಪ್ಟ್‌ನ ಖಲೀದ್ ಎಲ್–ಎನಾನಿ ಯುನೆಸ್ಕೋ ಮುಖ್ಯಸ್ಥರಾಗಿ ಆಯ್ಕೆ



ವಿಶ್ವಸಂಸ್ಥೆ : ಈಜಿಪ್ಟ್‌ನ ಮಾಜಿ ಸಚಿವ ಖಲೀದ್ ಎಲ್–ಎನಾನಿಯವರನ್ನು ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಏಜೆನ್ಸಿಯ (ಯುನೆಸ್ಕೋ) ಮುಂದಿನ ಮುಖ್ಯಸ್ಥರನ್ನಾಗಿ ನೇಮಿಸಲು ಯುನೆಸ್ಕೋ ಕಾರ್ಯನಿರ್ವಾಹಕ ಮಂಡಳಿ ಮತ ಚಲಾಯಿಸಿದೆ. ನಾಲ್ಕು ವರ್ಷಗಳ ಎರಡು ಅವಧಿ ಪೂರೈಸಿದ ನಿರ್ಗಮಿತ ಪ್ರಧಾನ ನಿರ್ದೇಶಕಿ ಆಡ್ರೆ ಅಜೌಲೆ ಅವರ ಸ್ಥಾನದಲ್ಲಿ ಖಲೀದ್ ಎಲ್–ಎನಾನಿ (54 ವರ್ಷ) ಯವರನ್ನು ಆಯ್ಕೆ ಮಾಡಲು ಕಾರ್ಯನಿರ್ವಾಹಕ ಮಂಡಳಿ ತೀರ್ಮಾನಿಸಿದೆ. 57 ಸದಸ್ಯರಲ್ಲಿ 55 ಮಂದಿ ಖಲೀದ್ ಪರ ಮತ ಚಲಾಯಿಸಿದ್ದಾರೆ.

# ವಿಶ್ವಸಂಸ್ಥೆಯಲ್ಲಿ ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಂಡ ಭಾರತ





ನವದೆಹಲಿ : ಮಹಿಳಾ ಹಕ್ಕುಗಳ ಕುರಿತು ಪಾಕಿಸ್ತಾನದ ಅತ್ಯಂತ ಕೆಟ್ಟ ದಾಖಲೆಯನ್ನು ಭಾರತ ವಿಶ್ವಸಂಸ್ಥೆಯಲ್ಲಿ ತರಾಟೆಗೆ ತೆಗೆದುಕೊಂಡಿದೆ. 1971ರಲ್ಲಿ ಆಪರೇಷನ್ ಸರ್ಚ್‌ಲೈಟ್ ಸಮಯದಲ್ಲಿ 400,000 ಮಹಿಳೆಯರ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ ಜನಾಂಗೀಯ ಹತ್ಯೆಯನ್ನು ತಿಳಿಸುವ ಮೂಲಕ ಪಾಕಿಸ್ತಾನದ ಜನ್ಮ ಜಾಲಾಡಿದೆ. ವಿಶ್ವಸಂಸ್ಥೆಯ ವೇದಿಕೆಯಲ್ಲಿ ಪಾಕಿಸ್ತಾನ ಕಾಶ್ಮೀರಿ ಮಹಿಳೆಯರ ದುಃಖದಲ್ಲಿದ್ದಾರೆಂದು ತೋರಿಸಲು ಪ್ರಯತ್ನಿಸಿದಾಗ ಭಾರತ 1971ರ ಆಪರೇಷನ್ ಸರ್ಚ್‌ಲೈಟ್‌ಅನ್ನು ಉಲ್ಲೇಖಿಸಿ ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಂಡಿದೆ.

# ಹಿಲ್ಸಾ ಮೀನಿನ ರಕ್ಷಣೆಗಾಗಿ ಯುದ್ಧ ನೌಕೆ ಮಾಡಿದ ಬಾಂಗ್ಲಾದೇಶ !



ನವದೆಹಲಿ :ಬಾಂಗ್ಲಾದೇಶ ತನ್ನ ಸಮುದ್ರ ಪ್ರದೇಶದಲ್ಲಿ ಯುದ್ಧನೌಕೆಗಳು ಮತ್ತು ಗಸ್ತು ಹೆಲಿಕಾಪ್ಟರ್‌ಗಳನ್ನು ನಿಯೋಜಿಸಿದೆ. ಮೊಹಮ್ಮದ್ ಯೂನಸ್ ಅವರ ಮಧ್ಯಂತರ ಸರ್ಕಾರವು ಹಿಲ್ಸಾ ಮೀನುಗಳನ್ನು ರಕ್ಷಿಸಲು ಈ ನಿರ್ಧಾರವನ್ನು ತೆಗೆದುಕೊಂಡಿರುವುದಾಗಿ ಹೇಳಿದೆ. ಹಿಲ್ಸಾ ಮೀನುಗಳು ಅಮೂಲ್ಯವಾದ ಜಾತಿಯ ಮೀನಾಗಿದೆ. ಈಗ ಹಿಲ್ಸಾ ಮೀನಿನ ಸಂತಾನೋತ್ಪತ್ತಿ ಕಾಲವಾಗಿದೆ. ಆದರೆ, ಈ ಅವಧಿಯಲ್ಲಿ ಮೀನುಗಾರರು ಬಲೆಗಳನ್ನು ಹಾಕುವ ಮೂಲಕ ಅಕ್ರಮವಾಗಿ ಈ ಮೀನುಗಳನ್ನು ಹಿಡಿಯುತ್ತಿದ್ದರು. ಇದಕ್ಕೆ ನಿಯಂತ್ರಣ ಹೇರುವ ಸಲುವಾಗಿ ಯೂನಸ್ ಸರ್ಕಾರ ಈ ನಿರ್ಧಾರವನ್ನು ತೆಗೆದುಕೊಂಡಿದೆ.

# ಭಾರತದಿಂದ ಹೆಚ್ಚು ಸರಕು ಖರೀದಿಸಲು ಸಿದ್ಧ ಎಂದ ಚೀನಾ




ನವದೆಹಲಿ : ಭಾರತ ಮತ್ತು ಚೀನಾ ನಡುವೆ ಆಮದು ಮತ್ತು ರಫ್ತು ಅಂತರ ಬಹಳ ಗಣನೀಯವಾಗಿ ಇದೆ. ಚೀನಾದೊಂದಿಗೆ ಮುಕ್ತವಾಗಿ ವ್ಯಾಪಾರ ಮಾಡಲು ಭಾರತಕ್ಕೆ ಭಯ ಇರುವುದು ಕಂಡುಬಂದಿದೆ. ಇದೇ ವೇಳೆ, ಚೀನಾ ತಾನು ಭಾರತದಿಂದ ಹೆಚ್ಚು ಸರಕುಗಳನ್ನು ಖರೀದಿಸಲು ಸಿದ್ಧ ಇರುವುದಾಗಿ ಹೇಳಿದೆ. ಆದರೆ, ಅದಕ್ಕೆ ಒಂದು ಷರತ್ತನ್ನೂ ಸೇರಿಸಿದೆ. ಚೀನಾದ ಮಹತ್ವಾಕಾಂಕ್ಷಿ ವ್ಯಾಪಾರ ಕೂಟವಾದ ಆರ್‌ಸಿಇಪಿಯನ್ನು (RCEP- Regional Comprehensive Economic Partnership) ಭಾರತ ಸೇರಬೇಕು ಎನ್ನುವುದು ಅದರ ಷರತ್ತು ವಿಧಿಸಿದೆ.

# ಜಪಾನ್‌ನ ಮೊದಲ ಮಹಿಳಾ ಪ್ರಧಾನಿಯಾಗಿ ಉಕ್ಕಿನ ಮಹಿಳೆ ಸನೇ ತಕೈಚಿ



ಟೋಕಿಯೋ : ಜಪಾನ್ ಹೊಸ ರಾಜಕೀಯ ಅಧ್ಯಾಯವನ್ನು ಪ್ರವೇಶಿಸಿದೆ, ಕಟ್ಟಾ ಸಂಪ್ರದಾಯವಾದಿ ಮತ್ತು ಮಾಜಿ ಆಂತರಿಕ ವ್ಯವಹಾರಗಳ ಸಚಿವೆ ಸನೇ ತಕೈಚಿ ಅವರು ಆಡಳಿತಾರೂಢ ಲಿಬರಲ್ ಡೆಮಾಕ್ರಟಿಕ್ ಪಕ್ಷದ(LDP) ನಾಯಕತ್ವವನ್ನು ಗೆದ್ದಿದ್ದಾರೆ. ಪಕ್ಷದ ಚುನಾವಣೆಯಲ್ಲಿನ ಅವರ ಗೆಲುವು ಅವರನ್ನು ಜಪಾನ್‌ನ ಮೊದಲ ಮಹಿಳಾ ಪ್ರಧಾನಿಯಾಗಲು ಸ್ಥಾನ ನೀಡುತ್ತದೆ. ಸನೇ ತಕೈಚಿ ಚುನಾವಣಾ ಹಿನ್ನಡೆಗಳ ನಂತರ ರಾಜೀನಾಮೆ ನೀಡಿದ ಶಿಗೇರು ಇಶಿಬಾ ಅವರ ಉತ್ತರಾಧಿಕಾರಿ. 64 ವರ್ಷದ ನಾಯಕಿ ಸನೇ ತಕೈಚಿ ತೀವ್ರ ಪೈಪೋಟಿಯ ರನ್‌ಆಫ್‌ನಲ್ಲಿ ಕೃಷಿ ಸಚಿವ ಶಿಂಜಿರೊ ಕೊಯಿಜುಮಿ ವಿರುದ್ಧ ಜಯಗಳಿಸಿದರು.

# ಗೆದ್ದರೂ ಪಾಯಿಂಟ್ ಪಟ್ಟಿಯಲ್ಲಿ ಸ್ಥಾನ ಪಡೆಯದ ಟೀಂ ಇಂಡಿಯಾ



ಹೈದರಾಬಾದ್ : ಅದ್ಭುತ ಗೆಲುವಿನ ಹೊರತಾಗಿಯೂ, ಭಾರತವು ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ 2025–27 ಅಂಕಗಳ ಪಟ್ಟಿಯಲ್ಲಿ ಯಾವುದೇ ಪ್ರಯೋಜನವನ್ನು ಪಡೆಯಲು ವಿಫಲವಾಯಿತು. 2025–27ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನಲ್ಲಿ ಇದು ಟೀಂ ಇಂಡಿಯಾದ ಆರನೇ ಪಂದ್ಯವಾಗಿತ್ತು. ಭಾರತದ ಗೆಲುವಿನ ಶೇಕಡಾವಾರು 46.67ರಿಂದ 55.56ಕ್ಕೆ ಏರಿದ್ದು, ಪಾಯಿಂಟ್ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದೆ. ವೆಸ್ಟ್ ಇಂಡೀಸ್ ತಂಡವನ್ನು ಸೋಲಿಸಿದ ನಂತರವೂ ಟೀಂ ಇಂಡಿಯಾ ಗೆಲುವಿನ ಶೇಕಡಾವಾರು ಪ್ರಮಾಣದಲ್ಲಿ ಆಸ್ಟ್ರೇಲಿಯಾ ಮತ್ತು ಶ್ರೀಲಂಕಾವನ್ನು ಮೀರಿಸಲು ಸಾಧ್ಯವಾಗಿಲ್ಲ.

# ಆಸ್ಟ್ರೇಲಿಯಾ ಪ್ರವಾಸಕ್ಕೆ ಟೀಂ ಇಂಡಿಯಾ ಪ್ರಕಟ




ಹೈದರಾಬಾದ್ : ವೆಸ್ಟ್ ಇಂಡೀಸ್ ವಿರುದ್ಧದ ಮೊದಲನೇ ಟೆಸ್ಟ್ ಪಂದ್ಯ ಮುಗಿದ ಬೆನ್ನಲ್ಲೇ ಬಿಸಿಸಿಐ, ಮುಂಬರುವ ಆಸ್ಟ್ರೇಲಿಯಾ ಪ್ರವಾಸಕ್ಕೆ ಟೀಂ ಇಂಡಿಯಾವನ್ನು ಪ್ರಕಟಿಸಿದೆ. ಪ್ರಸ್ತುತ ವಿಂಡೀಸ್ ವಿರುದ್ಧ 2 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ನಿರತವಾಗಿರುವ ಟೀಂ ಇಂಡಿಯಾ ಈ ಸರಣಿ ಮುಗಿದ ಬಳಿಕ ಮೂರು ಪಂದ್ಯಗಳ ಏಕದಿನ ಸರಣಿ ಹಾಗೂ ಐದು ಪಂದ್ಯಗಳ ಟಿ20 ಸರಣಿಗಾಗಿ ಆಸ್ಟ್ರೇಲಿಯಾಕ್ಕೆ ಪ್ರಯಾಣ ಬೆಳೆಸಲಿದೆ.

# GSTಯಲ್ಲಿ 8ವರ್ಷ ಸುಲಿಗೆ ಬಳಿಕ ಪೋಸು ಕೊಡುತ್ತಾರೆ : ಸಿಎಂ ಸಿದ್ದರಾಮಯ್ಯ



ಕೊಪ್ಪಳ : GST ಜಾರಿ ಮಾಡಿದ ಪರಧಾನಿ ಮೋದಿ ನೇತೃತ್ವದ ಕೇಂದ್ರದ ಬಿಜೆಪಿ ಸರ್ಕಾರ ಎಂಟು ವರ್ಷಗಳ ಕಾಲ ನಿರಂತರವಾಗಿ ರಾಜ್ಯದ ಮತ್ತು ದೇಶದ ಜನರ ಸುಲಿಗೆ ನಡೆಸಿತು. ನಾವು GST ಸುಲಿಗೆ ವಿರೋಧಿಸಿ ಸರಳೀಕರಣಕ್ಕೆ ಆಗ್ರಹಿಸಿದ್ದೆವು. ಸುಲಿಗೆ ನಡೆಸಿದವರೇ ಸರಳೀಕರಣದ ಕ್ರೆಡಿಟ್‌ಗಾಗಿ ಒದ್ದಾಡುತ್ತಿದ್ದಾರೆ. ಈಗಲೂ ಕೇಂದ್ರದಿಂದ 15 ಸಾವಿರ ಕೋಟಿ ರೂಪಾಯಿ ರಾಜ್ಯಕ್ಕೆ ಅನ್ಯಾಯ ಆಗುತ್ತಿದೆ. 15ನೇ ಹಣಕಾಸು ಆಯೋಗದಿಂದಲೂ ರಾಜ್ಯಕ್ಕೆ ಅನ್ಯಾಯ ಆಗುತ್ತ ಇದೆ. ನಮಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಬಿಜೆಪಿಯ ಸಂಸದರು ಮತ್ತು ರಾಜ್ಯ ಪ್ರತಿನಿಧಿಸುವ ಕೇಂದ್ರ ಮಂತ್ರಿಗಳು ಪಾರ್ಲಿಮೆಂಟಿನಲ್ಲಿ ತುಟಿ ಬಿಚ್ಚಲ್ಲ ಎಂದರು.

# ಖೈದಿಗಳ ದಿನಗೂಲಿ ಬಿಡುಗಡೆ ತಡೆಹಿಡಿದ ಸರಕಾರ?




ಬೆಂಗಳೂರು : ರಾಜ್ಯದ ಜೈಲಿನಲ್ಲಿರುವ ಕೈದಿಗಳಿಗೆ ದೇಶದಲ್ಲೇ ಅತಿ ಹೆಚ್ಚು, ಅಂದರೆ 615 ರು. ದಿನಗೂಲಿ ಇದ್ದು, ಸೆರೆಮನೆಯಲ್ಲಿದ್ದುಕೊಂಡೇ ಮಾಸಿಕ 18 ಸಾವಿರ ರೂ.ವರೆಗೂ ದುಡಿಯುತ್ತಿದ್ದಾರೆ. ಆದರೆ ಇದೀಗ ಆ ಕೈದಿಗಳಿಗೆ 'ಆರ್ಥಿಕ ಬರ' ಎದುರಾಗಿದೆ. ಏಕೆಂದರೆ ಕಳೆದ ಎರಡು ವರ್ಷಗಳಿಂದ ಕೈದಿಗಳ ದಿನಗೂಲಿ ಬಿಡುಗಡೆಗೊಳಿಸದೆ ರಾಜ್ಯ ಸರ್ಕಾರ ತಡೆ ಹಿಡಿದಿದೆ. ಇದು ಗ್ಯಾರಂಟಿ ಯೋಜನೆಗಳ ಅಡ್ಡ ಪರಿಣಾಮ ಎಂಬ ಮಾತುಗಳು ಕೇಳಿ ಬಂದಿದೆಯಾದರೂ, ಕೈದಿಗಳ ದಿನಗೂಲಿ ಏರಿಕೆಯಿಂದ ಎದುರಾದ ಹೆಚ್ಚುವರಿ ವೆಚ್ಚ ಭರಿಸಲು ಸರ್ಕಾರಕ್ಕೆ ಹಣಕಾಸು ಸಮಸ್ಯೆ ಉದ್ಭವಿಸಿದೆ ಎನ್ನಲಾಗಿದೆ.

# ಸರ್ವೇಯಲ್ಲಿ ಭಾಗಿಯಾಗೋ ಶಿಕ್ಷಕರು, ಇತರೆ ಸಿಬ್ಬಂದಿಗೆ ಗೌರವ ಧನ ಹೆಚ್ಚಳ



ಬೆಂಗಳೂರು: ರಾಜ್ಯ ಸರ್ಕಾರದ ವತಿಯಿಂದ ನಡೆಯುತ್ತಿರುವ ಜಾತಿಗಣತಿ ಸರ್ವೇಯಲ್ಲಿ ಭಾಗವಹಿಸುವ ಶಿಕ್ಷಕರು ಹಾಗೂ ಇತರೆ ಸಿಬ್ಬಂದಿಗೆ ನೀಡುವ ಗೌರವಧನವನ್ನು ಹೆಚ್ಚಳ ಮಾಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಪ್ರತಿ ಸಮೀಕ್ಷಾ ಸಿಬ್ಬಂದಿಗೆ ಆರಂಭಿಕವಾಗಿ 5,000 ನೀಡಲಾಗುತ್ತಿದ್ದು, ಜೊತೆಗೆ ಪ್ರತಿ ಮನೆ ಸಮೀಕ್ಷೆಗೆ 100ರಂತೆ ಒಟ್ಟು 20 ಸಾವಿರದಷ್ಟು ಗೌರವಧನ ನೀಡಲಾಗುವುದು ಎಂದು ಮಾಹಿತಿ ನೀಡಿದರು. ಇನ್ನು ಸಮೀಕ್ಷೆ ವೇಳೆ ಮೃತಪಟ್ಟ ಶಿಕ್ಷಕರ ಕುಟುಂಬಗಳಿಗೆ 20ಲಕ್ಷ ಪರಿಹಾರ ನೀಡಲಾಗುವುದು ಎಂದರು. ಅ.19ರೊಳಗೆ ಕಡ್ಡಾಯವಾಗಿ ಸರ್ವೇ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದ್ದಾರೆ.

# ವಿದ್ಯುತ್ ಕೊರತೆ ಆಗಬಾರದೆಂದು ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ




ಶಿವಮೊಗ್ಗ: ಎಲ್ಲಾ ಯೋಜನೆಗಳಿಗೂ ವಿರೋಧ ಮಾಡುವವರು ಇದ್ದೇ ಇರ್ತಾರೆ, ವಿರೋಧ ಮಾಡುವವರ ಜೊತೆ ನಮ್ಮ ಅಧಿಕಾರಿಗಳು ಮಾತನಾಡಲಿದ್ದಾರೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು. ಭದ್ರಾವತಿ ತಾಲೂಕಿನ ಭದ್ರಾ ಅಣೆಕಟ್ಟೆ ಬಳಿ ಇಂದು ಸಚಿವರು ಮಾಧ್ಯಮದವರೊಂದಿಗೆ ಮಾತನಾಡಿದರು. ರಾಜ್ಯದಲ್ಲಿ ಸದ್ಯಕ್ಕೆ ವಿದ್ಯುತ್ ಕೊರತೆ ಇಲ್ಲ. ಮುಂದಿನ ನಾಲ್ಕೈದು ವರ್ಷದ ನಂತರ ವಿದ್ಯುತ್ ಕೊರತೆ ಆಗಬಾರದೆಂದು ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ ಮಾಡುತ್ತಿದ್ದೇವೆ ಎಂದು ಅವರು ಸ್ಪಷ್ಟಪಡಿಸಿದರು. ಈ ಯೋಜನೆಯಿಂದ ರಾಜ್ಯಕ್ಕೆ ಎರಡು ಸಾವಿರ ಮೆಗಾವ್ಯಾಟ್ ವಿದ್ಯುತ್ ಲಭ್ಯವಾಗುತ್ತದೆ ಎಂದರು.

# ಬೇಕಾಬಿಟ್ಟಿ ಕಟ್ಟಡ ತ್ಯಾಜ್ಯ ಹಾಗೂ ಕಸ ವಿರುದ್ಧ ಪ್ರಕರಣ ದಾಖಲಿಸಲು ಸೂಚನೆ



ಬೆಂಗಳೂರು: ಎಲ್ಲೆಂದರಲ್ಲಿ ಕಟ್ಟಡ ತ್ಯಾಜ್ಯ ಹಾಗೂ ಕಸವನ್ನು ಎಸೆಯುವರನ್ನು ಗುರುತಿಸಿ ಅವರ ವಿರುದ್ಧ ಪ್ರಕರಣ ದಾಖಲಿಸಿ ಎಂದು ಪೊಲೀಸರಿಗೆ ಸೂಚನೆ ನೀಡಿದ್ದೇವೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಎಲ್ಲೆಂದರಲ್ಲಿ ಕಸದ ಸಮಸ್ಯೆ ಹೆಚ್ಚಿದೆ. ಇದಕ್ಕೂ ಸಹ ಒಂದು ಅಭಿಯಾನ ನಡೆಸಲಾಗುವುದು. ಎಲ್ಲೆಂದರಲ್ಲಿ ಕಟ್ಟಡ ತ್ಯಾಜ್ಯ ಹಾಗೂ ಕಸವನ್ನು ಎಸೆಯುವರನ್ನು ಗುರುತಿಸಿ ಅವರ ವಿರುದ್ಧ ಪ್ರಕರಣ ದಾಖಲಿಸಿ ಎಂದು ಪೊಲೀಸರಿಗೆ ಸೂಚನೆ ನೀಡಿದ್ದೇವೆ. ಎಲ್ಲೆಂದರಲ್ಲಿ ಸುರಿದಿರುವ ಕಟ್ಟಡ ತ್ಯಾಜ್ಯಗಳನ್ನು ಶೀಘ್ರ ವಿಲೇವಾರಿ ಮಾಡಲಾಗುವುದು ಎಂದರು.

# ದಸರಾ ಮೆರವಣಿಗೆಯಲ್ಲಿ ದ್ವಿತೀಯ ಪ್ರಶಸ್ತಿ ಪಡೆದ ದ.ಕ.ಜಿಲ್ಲೆ





ಮಂಗಳೂರು: ಮೈಸೂರು ದಸರಾ ಮಹೋತ್ಸವದ ಮೆರವಣಿಗೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ವತಿಯಿಂದ ಕಲೆ ಸಂಸ್ಕೃತಿ ಸಂಪ್ರದಾಯಿಕ ಕ್ರೀಡೆಯನ್ನು ಪ್ರತಿಬಿಂಬಿಸುವ ಟ್ಯಾಬ್ಲೋ ಪ್ರದರ್ಶನ ಮಾಡಿದ್ದು ಜಿಲ್ಲೆಗೆ 2ನೇ ಪ್ರಶಸ್ತಿ ಬಂದಿರುತ್ತದೆ. ಯಕ್ಷಗಾನ, ಕಂಬಳ, ಹುಲಿವೇಷ ಮತ್ತಿತರ ಸಾಂಪ್ರದಾಯಿಕ ಮತ್ತು ಜಾನಪದ ಕ್ರೀಡೆಗಳ ವಿಷಯಗಳನ್ನು ಈ ಟ್ಯಾಬ್ಲೋದಲ್ಲಿ ಪ್ರದರ್ಶಿಸಲಾಗಿತ್ತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿರವರ ಮಾರ್ಗದರ್ಶನದಲ್ಲಿ ಟ್ಯಾಬ್ಲೋ ನಿರ್ಮಿಸಲಾಗಿತ್ತು. ನೋಡಲ್ ಅಧಿಕಾರಿಯಾಗಿ ಗ್ರಾಮೀಣ ಕೈಗಾರಿಕೆ ಇಲಾಖೆ ಉಪ ನಿರ್ದೇಶಕರು ಮಂಜುನಾಥ್ ಹೆಗಡೆ ಕಾರ್ಯ ನಿರ್ವಹಿಸಿರುತ್ತಾರೆ.

# ಕಾಂಗ್ರೆಸ್‌ಗಿಂತ ಮುಂದಿರುವ ಬಿಜೆಪಿ ಮತ್ತು ಜನ್ ಸುರಾಜ್




ಪಾಟ್ನಾ : ಬಿಹಾರ ವಿಧಾನಸಭಾ ಚುನಾವಣೆಗೆ ದಿನಾಂಕಗಳು ಘೋಷಣೆಯಾಗಿದ್ದು, ಎರಡು ಹಂತಗಳಲ್ಲಿ ಚುನಾವಣೆ ನಡೆಯುತ್ತಿದೆ. ಬಿಜೆಪಿ ಹಾಗೂ ಈಗಷ್ಟೇ ಕಣ್ತೆರೆದಿರುವ ರಾಜಕೀಯ ತಂತ್ರಜ್ಞ ಪ್ರಶಾಂತ್ ಕಿಶೋರ್ ಅವರ ಜನ್ ಸುರಾಜ್ ಪಕ್ಷ ಬೆಂಗಳೂರಿನಲ್ಲಿರುವ ಬಿಹಾರಿಗಳನ್ನು ಚುನಾವಣೆಗೆ ಸಜ್ಜುಗೊಳಿಸಲು ಮುಂದಾಗಿದೆ. ಈ ಎರಡೂ ಪಕ್ಷಗಳು ಕಾಂಗ್ರೆಸ್‌ಗಿಂತ ಹಲವು ಹೆಜ್ಜೆಗಳನ್ನು ಮುಂದಿರಿಸಿದ್ದಾರೆ. ಕರ್ನಾಟಕದಲ್ಲಿ ಬಿಹಾರಿಗಳನ್ನು ಚುನಾವಣೆಗೆ ಸಜ್ಜುಗೊಳಿಸಲು ಕಾಂಗ್ರೆಸ್ ಯಾವುದೇ ಅಭಿಯಾನವನ್ನು ಕೈಗೊಂಡಿಲ್ಲ ಎಂದು ಹಿರಿಯ ನಾಯಕರೊಬ್ಬರು ತಿಳಿಸಿದ್ದಾರೆ. ಸುಮಾರು 5ಲಕ್ಷ ಬಿಹಾರಿಗಳಿದ್ದಾರೆ ಎಂದು ಅಂದಾಜುಮಾಡಲಾಗಿದೆ.

# ದೀಪಾವಳಿಗೆ ಮುನ್ನ ಮತ್ತೊಂದು ಸುಧಾರಣಾ ಹೆಜ್ಜೆ: ನೀತಿ ಆಯೋಗ



ನವದೆಹಲಿ : ದೀಪಾವಳಿಗೆ ಮುನ್ನ ಪ್ರಮುಖ ಸುಧಾರಣಾ ಕ್ರಮ ಘೋಷಣೆ ಆಗುವ ಸಾಧ್ಯತೆ ಇದೆ ಎಂದು ನೀತಿ ಆಯೋಗ್ ಸಿಇಒ ಬಿ.ವಿ.ಆರ್. ಸುಬ್ರಹ್ಮಣ್ಯಂ ಹೇಳಿದ್ದಾರೆ. ಸರ್ಕಾರ ಇತ್ತೀಚೆಗಷ್ಟೇ ಜಿಎಸ್‌ಟಿಯಲ್ಲಿ ಸುಧಾರಣೆ ತಂದಿತ್ತು. ಬಹಳಷ್ಟು ಸರಕುಗಳ ಮೇಲಿನ ತೆರಿಗೆ ಗಣನೀಯವಾಗಿ ಇಳಿಕೆ ಆಗಿತ್ತು. ಬಹುತೇಕ ಎಲ್ಲಾ ವಲಯದಿಂದಲೂ ಜಿಎಸ್‌ಟಿ 2.0 ಕ್ರಮಕ್ಕೆ ಸ್ವಾಗತ ಸಿಕ್ಕಿದೆ. ಈಗ ಮ್ಯಾನುಫ್ಯಾಕ್ಚರಿಂಗ್‌ನಲ್ಲಿ ದಾಪುಗಾಲಿಡಲು ಸಜ್ಜಾಗಿರುವ ಭಾರತ ಮತ್ತಷ್ಟು ಸುಧಾರಣಾ ಕ್ರಮಗಳನ್ನು ಎದುರು ನೋಡುತ್ತಿದೆ. ದೀಪಾವಳಿಗೆ ಮುನ್ನ ಒಂದು ದೊಡ್ಡ ಘೋಷಣೆ ಆಗಬಹುದು ಎನ್ನುವ ಸುಳಿವನ್ನು ನೀತಿಆಯೋಗ್ ಸಿಇಒ ಬಿಚ್ಚಿಟ್ಟಿದ್ದಾರೆ.

# ಎಲೆಕ್ಟ್ರಿಕ್ ವಾಹನಗಳ ಬೆಲೆ ಪೆಟ್ರೋಲ್–ಡೀಸೆಲ್ ವಾಹನ ಬೆಲೆಗೆ ಸಮನಾಗಿರುತ್ತದೆ : ಗಡ್ಕರಿ




ನವದೆಹಲಿ: ಮುಂದಿನ ನಾಲ್ಕರಿಂದ ಆರು ತಿಂಗಳಲ್ಲಿ ಎಲೆಕ್ಟ್ರಿಕ್ ವಾಹನಗಳ ಬೆಲೆ ಪೆಟ್ರೋಲ್–ಡೀಸೆಲ್ ಬೆಲೆಗೆ ಸಮನಾಗಿರುತ್ತದೆ ಎಂದು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನಾನು ಎಲೆಕ್ಟ್ರಿಕ್ ವಾಹನಗಳನ್ನು ಬಿಡುಗಡೆ ಮಾಡಿದಾಗ, ಬ್ಯಾಟರಿ ಬೆಲೆ ಪ್ರತಿ ಕಿಲೋವ್ಯಾಟ್ ಗಂಟೆಗೆ 150 ಡಾಲರ್ ಆಗಿತ್ತು. ಇಂದು ಅದು ಪ್ರತಿ ಕಿಲೋವ್ಯಾಟ್ ಗಂಟೆಗೆ 55 ಡಾಲರ್‌ನಿಂದ 65 ಡಾಲರ್‌ಗೆ ಇಳಿಕೆಯಾಗಿದೆ. ಮುಂಬರುವ ನಾಲ್ಕರಿಂದ ಆರು ತಿಂಗಳಲ್ಲಿ, ಎಲೆಕ್ಟ್ರಿಕ್ ಸ್ಕೂಟರ್‌ಗಳು, ಎಲೆಕ್ಟ್ರಿಕ್ ಕಾರುಗಳು ಮತ್ತು ಎಲೆಕ್ಟ್ರಿಕ್ ಬಸ್‌ಗಳು ಪೆಟ್ರೋಲ್–ಡೀಸೆಲ್ ಬೆಲೆಗೆ ಸಮಾನವಾಗುತ್ತವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

# ಬಿಹಾರ ವಿಧಾನಸಭಾ ಚುನಾವಣೆಗೆ 2 ಹಂತಗಳಲ್ಲಿ ಮತದಾನ



ನವದೆಹಲಿ: ಬಿಹಾರ ವಿಧಾನಸಭಾ ಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ದಿನಾಂಕ ಘೋಷಣೆ ಮಾಡಿದೆ. ನವದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೇಂದ್ರ ಚುನಾವಣಾ ಆಯೋಗದ ಮುಖ್ಯಸ್ಥ ಜ್ಞಾನೇಶ್ ಕುಮಾರ್, ಬಿಹಾರ 243 ವಿಧಾನಸಭಾ ಕ್ಷೇತ್ರಗಳಿವೆ. 7.43 ಕೋಟಿ ಮತದಾರರಿದ್ದಾರೆ. ಬಿಹಾರ ವಿಧಾನಸಭೆಗೆ ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ ಎಂದು ತಿಳಿಸಿದ್ದಾರೆ. ನವೆಂಬರ್ 6ರಂದು ಬಿಹಾರದಲ್ಲಿ ಮೊದಲ ಹಂತದಲ್ಲಿ ಮತದಾನ ನಡೆಯಲಿದೆ. ನವೆಂಬರ್ 11ರಂದು ಎರಡನೇ ಹಂತದಲ್ಲಿ ಮತದಾನ ನಡೆಯಲಿದೆ. ನವೆಂಬರ್ 14ರಂದು ಚುನಾವಣಾ ಫಲಿತಾಂಶ ಪ್ರಕಟವಾಗಲಿದೆ ಎಂದು ತಿಳಿಸಿದರು.

# ನಗರಗಳ ಹೆಸರು ಬದಲಾಯಿಸಿರುವುದು ಐತಿಹಾಸಿಕ : ಅಮಿತ್ ಶಾ



ಮುಂಬೈ : ಬಿಜೆಪಿ–ಶಿವಸೇನಾ ಸರ್ಕಾರವು ಐತಿಹಾಸಿಕ ನಿರ್ಧಾರವನ್ನು ತೆಗೆದುಕೊಂಡು ಔರಂಗಾಬಾದ್ ಹೆಸರನ್ನು ಛತ್ರಪತಿ ಸಂಭಾಜಿ ನಗರ ಮತ್ತು ಅಹ್ಮದ್‌ನಗರವನ್ನು ಅಹಲ್ಯಾನಗರ ಎಂದು ಬದಲಾಯಿಸಿದೆ ಎಂದು ಕೇಂದ್ರ ಗೃಹಸಚಿವ ಅಮಿತ್‌ಶಾ ಹೇಳಿದರು. ಮಹಾರಾಷ್ಟ್ರದ ಔರಂಗಾಬಾದ್ ಅನ್ನು ಛತ್ರಪತಿ ಸಂಭಾಜಿ ನಗರ ಮತ್ತು ಅಹ್ಮದ್‌ನಗರವನ್ನು ಅಹಲ್ಯಾನಗರ ಎಂದು ಮರುನಾಮಕರಣ ಮಾಡುವ ಐತಿಹಾಸಿಕ ನಿರ್ಧಾರವನ್ನು ಅಮಿತ್‌ಶಾ ಘೋಷಿಸಿದರು. ಇದು ಛತ್ರಪತಿ ಶಿವಾಜಿ ಮಹಾರಾಜರ ಅನುಯಾಯಿಗಳಿಂದ ಮಾತ್ರ ಸಾಧ್ಯ ಎಂದರು.

# ಸಂಭಾಲ್ ಮಸೀದಿ ನೆಲಸಮಕ್ಕೆ ತಡೆ ನೀಡಲು ನಿರಾಕರಿಸಿದ ಅಲಹಾಬಾದ್ ಹೈಕೋರ್ಟ್




ಲಖನೌ: ಉತ್ತರ ಪ್ರದೇಶದ ಸಂಭಾಲ್‌ನಲ್ಲಿ ಸರ್ಕಾರಿ ಭೂಮಿಯಲ್ಲಿ ನಿರ್ಮಿಸಲಾಗಿದೆ ಎನ್ನಲಾದ ಮಸೀದಿ, ಮದುವೆ ಸಭಾಂಗಣವನ್ನು ಮತ್ತು ಆಸ್ಪತ್ರೆಯನ್ನು ಬುಲ್ಡೋಜರ್ ಮೂಲಕ ನೆಲಸಮ ಮಾಡುವುದಕ್ಕೆ ತಡೆ ನೀಡಲು ಅಲಹಾಬಾದ್ ಹೈಕೋರ್ಟ್ ಶನಿವಾರ ನಿರಾಕರಿಸಿದ್ದು, ಮುಸ್ಲಿಂ ಪಕ್ಷ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದೆ.




# ಸಾಧಕರೊಬ್ಬರನ್ನು ಸನ್ಮಾನಿಸಲಿರುವ ಕಾನ್ಫಿಕ್ ಚಿತ್ರೋತ್ಸವ..“ಎಸ್‌ವಿಆರ್ 50” ಸಮಾರಂಭ..




ಭಕ್ತರಾಮದಾಸ, ಮಹಾನಂದ, ನಾಗಕನ್ಯೆ ಚಿತ್ರಗಳಲ್ಲಿ ಅಭಿನಯಿಸುತ್ತಿದಂತೆ ಪ್ರತಿಮಾ ದೇವಿಯವರು, ಮಹಾತ್ಮ ಪಿಕ್ಚರ್ಸ್‌ನ ಸೂತ್ರದಾರರಾದ ಶಂಕರ ಸಿಂಗ್ ಅವರನ್ನು ವರಿಸಿದರು. ಕಲ್ಲಡ್ಕದಲ್ಲಿ ಹುಟ್ಟಿ ಉಡುಪಿಯಲ್ಲಿ ಬಾಲ್ಯದ ದಿನಗಳಲ್ಲಿ ಬೆಳೆದು ಶಿವಮೊಗ್ಗದ ಹಾದಿಯಾಗಿ ಮೈಸೂರು ಸೇರಿ ಕಲಾವಿದೆಯಾಗಿ ಹೆಸರುವಾಸಿಯಾಗಿದ್ದ ಪ್ರತೀಮಾ ದೇವಿ ಅವರು ಆಗಿನ ಕಾಲಕ್ಕೆ ಸೂಪರ್ ಹಿಟ್ ಆಗಿದ್ದ “ಜಗನ್ಮೋಹಿನಿ” ಚಿತ್ರದಲ್ಲಿ ಅಭಿನಯಿಸುವಾಗ ಅವರಿಗೆ ಮದುವೆಯಾಗಿ ಒಂದು ಮಗು ಇತ್ತು, ಅವರೇ ನಿರ್ದೇಶಕ ಎಸ್ ವಿ ರಾಜೇಂದ್ರ ಸಿಂಗ್ ಬಾಬು. ರಾಜೇಂದ್ರ ಸಿಂಗ್ ಬಾಬು ಅವರ ತಂದೆ ಶಂಕರ್ ಸಿಂಗ್‌ರವರ ಕೊಡುಗೆ ಕನ್ನಡ ಚಿತ್ರರಂಗಕ್ಕೆ ಅಪಾರವಾದದ್ದು. ಈ ಇಬ್ಬರು ಮಹಾನ್ ಸಾಧಕರ ಸುಪುತ್ರರೇ ನಿರ್ದೇಶಕರಾಗಿ 50 ವರ್ಷ ಪೂರೈಸಿದ ಧೀಮಂತ ನಿರ್ದೇಶಕ ರಾಜೇಂದ್ರ ಸಿಂಗ್ ಬಾಬು. ಅವರ ತಂಗಿ ವಿಜಯಲಕ್ಷ್ಮೀ ಸಿಂಗ್ ಕೂಡ ನಟಿ, ಚಿತ್ರ ನಿರ್ದೇಶಕಿ, ನಿರ್ಮಾಪಕಿ. ಇಂದಿಗೂ ತರುಣರಂತೆ ಚಿತ್ರರಂಗದಲ್ಲಿ ಏನಾದರೂ ಮಾಡಬೇಕೆಂದು ತವಕಿಸುತ್ತಿರುವ ರಾಜೇಂದ್ರ ಸಿಂಗ್ ಬಾಬು ಅವರು ಈಗ ಕೈಗೆತ್ತಿಕೊಂಡಿರುವ ಸಿನಿಮಾ ಕಂಬುಳ. ಅಂದಿನಿಂದ ಇಂದಿನವರೆಗೂ ಎಡೆಬಿಡದೆ ಏನಾದರೂ ಮಾಡಬೇಕೆನ್ನುವ ಹಂಬಲ ಇರುವ ಛಲಗಾರ. ನಾಗರಹೊಳೆ, ಅಂತ, ಬಂಧನ, ಮುತ್ತಿನ ಹಾರ, ಭೂಮಿ ತಾಯಿ ಚೊಚ್ಚಲ ಮಗ, ಹೂವು ಹಣ್ಣು ಮುಂತಾದ ಹೆಸರಾಂತ ಚಿತ್ರಗಳನ್ನು ನಿರ್ದೇಶಿಸಿ ರಾಷ್ಟ್ರ ಹಾಗೂ ರಾಜ್ಯ ಪ್ರಶಸ್ತಿಗಳನ್ನು ಬಾಚಿಕೊಂಡ ಸಾಧಕ. ಈಗ ಅವರ ಸಾಧನೆಯನ್ನು ಗುರುತಿಸಿ ಕನ್ನಡ ಚಿತ್ರ ವಾಣಿಜ್ಯ ಮಂಡಳಿ ಅವರಿಗೆ ಸನ್ಮಾನ ಸಮಾರಂಭವನ್ನು ಕಾನ್ಫಿಕ್ ಚಿತ್ರೋತ್ಸವದ ಹೆಸರಲ್ಲಿ ಮಾಡಹೊರಟಿದೆ. ಎಸ್ ವಿ ರಾಜೇಂದ್ರಸಿಂಗ್ ಬಾಬು ಅವರು ನಿರ್ದೇಶಕರಾಗಿ ಇದೇ ಅಕ್ಟೋಬರ್ ತಿಂಗಳಿಗೆ 50 ವರ್ಷಗಳಾಗಿದೆ. ಈ ಸಂಭ್ರಮವನ್ನು ಸಂಭಮಿಸಲು ಕನ್ನಡ ಚಿತ್ರರಂಗದಿಂದ “ಎಸ್‌ವಿಆರ್ 50” ಎಂಬ ಅದ್ದೂರಿ ಸಮಾರಂಭ ಆಯೋಜಿಸಿ ರಾಜೇಂದ್ರ ಸಿಂಗ್ ಬಾಬು ಅವರನ್ನು ಆತ್ಮೀಯವಾಗಿ ಸನ್ಮಾನಿಸಲಿದೆ. ಐದು ದಿನಗಳ ಕಾಲ ಅದ್ದೂರಿಯಾಗಿ ಈ ಸಮಾರಂಭ ನಡೆಯಲಿದೆ. ಸಮಾರಂಭದ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಕನ್ನಡ ಚಿತ್ರರಂಗದ ಹಿರಿಯ ನಿರ್ದೇಶಕರಾದ ಗಿರೀಶ್ ಕಾಸರವಳ್ಳಿ, ನಾಗತಿಹಳ್ಳಿ ಚಂದ್ರಶೇಖರ್, ಪಿ.ಶೇಷಾದ್ರಿ, ನಂಜುಂಡೇಗೌಡ, ವಿಜಯಲಕ್ಷ್ಮಿ ಸಿಂಗ್, ಸಂಗೀತ ನಿರ್ದೇಶಕ ಹಂಸಲೇಖ, ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್, ಪತ್ರಕರ್ತ ಗಂಗಾಧರ್ ಮೊದಲಿಯರ್, ಲಿಂಗದೇವರು, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವನಾಥ್, ಸಂಕಲನಕಾರ ಕೆಂಪರಾಜ್ ಹಾಗೂ ಸಮಾರಂಭದ ಆಯೋಜಕರಾದ ಕೃಷ್ಣೇಗೌಡ ಉಪಸ್ಥಿತರಿದ್ದರು. ಕರ್ನಾಟಕ ಮಾತ್ರವಲ್ಲ, ಇಡೀ ಭಾರತೀಯ ಚಿತ್ರರಂಗದ ಇತಿಹಾಸದಲ್ಲೇ ಈವರೆಗೂ 50 ವರ್ಷಗಳ ಸಕ್ರಿಯವಾಗಿ ನಿರ್ದೇಶಕರಾಗಿರುವವರು ಯಾರು ಇಲ್ಲ. ಅದು ರಾಜೇಂದ್ರಸಿಂಗ್ ಬಾಬು ಅವರು ಒಬ್ಬರೆ. ಈಗಲೂ ಅವರ ನಿರ್ದೇಶನದ ಎರಡು ಚಿತ್ರಗಳು ತೆರೆಗೆ ಬರಲು ಸಿದ್ದಾವಾಗಿದೆ. ಈ ಸುವರ್ಣ ಸಂಭ್ರಮವನ್ನು ಸಂಭ್ರಮಿಸಲು ಅಕ್ಟೋಬರ್ 23 ರಿಂದ 5 ದಿನಗಳ ಕಾಲ “ಎಸ್‌ವಿ ಆರ್ 50” ಎಂಬ ಅದ್ದೂರಿ ಸಮಾರಂಭ ನಡೆಸಲಾಗುತ್ತಿದೆ. 23ರಂದು ಚಾಮರಾಜಪೇಟೆಯ ಕಲಾವಿದರ ಸಂಘದಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದೆ. ಅಲ್ಲಿಂದ ನಾಲ್ಕು ದಿನಗಳ ಕಾಲ ಕಲಾವಿದರ ಸಂಘದಲ್ಲಿ ರಾಜೇಂದ್ರಸಿಂಗ್ ಬಾಬು ಅವರ ನಿರ್ದೇಶನದ ರಾಷ್ಟ್ರ ಹಾಗೂ ರಾಜ್ಯ ಪ್ರಶಸ್ತಿ ಚಿತ್ರಗಳ ಚಿತ್ರೋತ್ಸವ ನಡೆಯಲಿದೆ. ದಿನಕ್ಕೆ ಎರಡು ಚಿತ್ರಗಳ ಪ್ರದರ್ಶನವಿರುತ್ತದೆ. ಈ ಸಂದರ್ಭದಲ್ಲಿ ಕನ್ನಡ ಹಾಗೂ ಇತರ ಭಾಷೆಗಳ ಗಣ್ಯರು ಪಾಲ್ಗೊಳ್ಳಲಿದ್ದಾರೆ. 27ರಂದು ರವೀಂದ್ರ ಕಲಾಕ್ಷೇತ್ರದಲ್ಲಿ ಸಮಾರೋಪ ಸಮಾರಂಭ ನಡೆಯಲಿದ್ದು, ಅಂದು ರಾಜೇಂದ್ರ ಸಿಂಗ್ ಬಾಬು ಅವರಿಗೆ ಚಿತ್ರರಂಗದ ಪರವಾಗಿ ಆತ್ಮೀಯುವಾಗಿ ಸನ್ಮಾನ ಸಮಾರಂಭ ನಡೆಯಲಿದೆ. ಅದಕ್ಕೂ ಮುನ್ನ ಬೆ.11ರಿಂದ ಮಧ್ಯಾಹ್ನ 3 ಗಂಟೆವರಗೂ ರಾಜೇಂದ್ರಸಿಂಗ್ ಬಾಬು ಅವರ ಜನಪ್ರಿಯ ಹಾಡುಗಳ ಥೀಮ್ ಮ್ಯೂಸಿಕ್ ಬಳಸಿಕೊಂಡು ನುರಿತ ಮಾಡಲ್‌ಗಳು ಫ್ಯಾಷನ್ ಶೋ ಸಹ ನಡೆಸಲಿದ್ದಾರೆ ಇದೇ ಸಂದರ್ಭದಲ್ಲಿ ಗಂಗಾಧರ್ ಮೊದಲಿಯರ್ ಅವರು ಬರೆದಿರುವ ಪುಸ್ತಕ ಸೇರಿದಂತೆ ಎರಡು ಪುಸ್ತಕಗಳ ಬಿಡುಗಡೆ ಹಾಗೂ ಲಿಂಗದೇವರು ಅವರು ನಿರ್ದೇಶಿಸಿರುವ ಸಾಕ್ಷ್ಯಚಿತ್ರದ ಪ್ರದರ್ಶನವಿರುತ್ತದೆ. ಹಂಸಲೇಖ ಅವರ ನೇತೃತ್ವದಲ್ಲಿ ರಾಜೇಂದ್ರ ಸಿಂಗ್ ಬಾಬು ಅವರ ನಿರ್ದೇಶನದ ಚಿತ್ರಗಳ ಜನಪ್ರಿಯ ಹಾಡುಗಳನ್ನು ಹಂಸಲೇಖ ಅವರ ತಂಡದವರು ಹಾಡಲಿದ್ದಾರೆ. ಸನ್ಮಾನ್ಯ ಮುಖ್ಯ ಮಂತ್ರಿಗಳು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಸಮಾರಂಭದ ಆಯೋಜಕ ಕೃಷ್ಣೇಗೌಡ ತಿಳಿಸಿದರು. ಸಿನಿಮಾ ನಿರ್ದೇಶನವನ್ನು ಹೊರತುಪಡಿಸಿ, ಚಿತ್ರರಂಗಕ್ಕಾಗಿ ಸಾಕಷ್ಟು ಕೆಲಸಗಳನ್ನು ಮಾಡಿರುವ ರಾಜೇಂದ್ರಸಿಂಗ್ ಬಾಬು ಅವರ ಸಾಧನೆ ಬಗ್ಗೆ ಮತ್ತು ಅವರು ನಿರ್ದೇಶಕರಾಗಿ 50 ವರ್ಷಗಳು ಪೂರೈಸಿರುವ ಈ ಸಂದರ್ಭದಲ್ಲಿ ಅವರನ್ನು ಪತ್ರಿಕಾಗೋಷ್ಠಿಯಲ್ಲಿ ನೆರೆದಿದ್ದ ಎಲ್ಲಾ ಗಣ್ಯರು ಅಭಿನಂದಿಸಿದರು.













KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd ‘A’ Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021